ಸಂಪುಟ: 11 ಸಂಚಿಕೆ: 166 ಪುಟ: 4+2 ಬೆಲೆ : 3.00 ಬುಧವಾರ, ಆಗಸ್ಟ್ 05, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 166 Pages : 4+2 Rate : 3.00 Wednesday, August 05, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

### 22 ನಗರಸಭೆ ಸದಸ್ಯರ ರಾಜೀನಾಮೆ | ಎಚ್.ಕೆ. ಪಾಟೀಲಗೆ ಸಚಿವ ಸ್ಥಾನ ನೀಡಲು ಒತ್ತಾಯ

# ಹೈಕಮಾಂಡ್ ವಿರುದ್ಧ ಗದಗ ಕಾಂಗ್ರೆಸ್‌ನ ಬಹಿರಂಗ ಬಂಡಾಯ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಕ್ಷೇತ್ರದ ಹಿರಿಯ ಶಾಸಕ ಹಾಗೂ ಮಾಜಿ ಸಚಿವ ಡಾ. ಎಚ್.ಕೆ. ಪಾಟೀಲ ಅವರಿಗೆ ರಾಜ್ಯ ಸಚಿವ ಸಂಪುಟದಲ್ಲಿ ಸ್ಥಾನ ನೀಡದ ಹಿನ್ನೆಲೆಯಲ್ಲಿ ಗದಗದಲ್ಲಿ ಕಾಂಗ್ರೆಸ್‌ನೊಳಗಿನ ಅಸಮಾಧಾನ ಭುಗಿಲೆದ್ದಿದೆ. ಗದಗ-ಬೆಟಗೇರಿ ನಗರಸಭೆಯ 17 ಚುನಾಯಿತ ಕಾಂಗ್ರೆಸ್ ಸದಸ್ಯರು ಹಾಗೂ 5 ನಾಮನಿರ್ದೇಶಿತ ಸದಸ್ಯರು ಸೇರಿ ಒಟ್ಟು 22 ಸದಸ್ಯರು ತಮ್ಮ ಸ್ಥಾನಕ್ಕೆ ಸಾಮೂಹಿಕ ರಾಜೀನಾಮೆ ನೀಡಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರಿಗೆ ಸಲ್ಲಿಸುವ ಮೂಲಕ ರಾಜ್ಯ ಕಾಂಗ್ರೆಸ್ ನಾಯಕತ್ವದ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.ರಾಜೀನಾಮೆ ಸಲ್ಲಿಸಿದ ಬಳಿಕ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಪ್ರತಿಭಟನೆ ನಡೆಸಿದ ಸದಸ್ಯರು, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ, ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ, ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಹಾಗೂ ಕಾಂಗ್ರೆಸ್ ಹೈಕಮಾಂಡ್ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ಹೊರಹಾಕಿದರು. ಹಿರಿಯ ನಾಯಕ ಡಾ. ಎಚ್.ಕೆ. ಪಾಟೀಲ ಅವರಿಗೆ ಸಚಿವ ಸ್ಥಾನ ನೀಡಲೇಬೇಕು ಎಂದು ಒತ್ತಾಯಿಸಿದರು.

ಕೆಲ ನಗರಸಭೆ ಸದಸ್ಯರು ಮಾತನಾಡಿ, ನಾಲ್ಕು ಬಾರಿ ವಿಧಾನ ಪರಿಷತ್ ಸದಸ್ಯರಾಗಿ, ಮೂರು ಬಾರಿ ಶಾಸಕರಾಗಿ, ಸಚಿವರಾಗಿ ಹಾಗೂ ರಾಜ್ಯ ರಾಜಕಾರಣದಲ್ಲಿ ಅನುಭವಿ ನಾಯಕರಾಗಿ ಸೇವೆ ಸಲ್ಲಿಸಿರುವ ಎಚ್.ಕೆ. ಪಾಟೀಲ ಅವರ ಅನುಭವವನ್ನು ಸಂಪುಟದಲ್ಲಿ ಬಳಸಿಕೊಳ್ಳದೇ ಇರುವುದು ಗದಗ ಜಿಲ್ಲೆಗೆ ಮಾತ್ರವಲ್ಲ, ಉತ್ತರ ಕರ್ನಾಟಕಕ್ಕೂ ಮಾಡಿದ ಅನ್ಯಾಯವಾಗಿದೆ ಎಂದು ಆರೋಪಿಸಿದರು.



**ಉತ್ತರ ಕರ್ನಾಟಕ ಪ್ರತ್ಯೇಕ ರಾಜ್ಯಕ್ಕೆ ಆಗ್ರಹ**

ಪ್ರತಿ ಬಾರಿ ಉತ್ತರ ಕರ್ನಾಟಕ ಭಾಗವನ್ನು ಕಡೆಗಣಿಸಲಾಗುತ್ತಿದೆ. ಉತ್ತರ ಕರ್ನಾಟಕದ ಪ್ರಭಾವಿ ಹಾಗೂ ಅನುಭವಿ ನಾಯಕರಿಗೆ ಸಚಿವ ಸಂಪುಟದಲ್ಲಿ ಅವಕಾಶ ನಿರಾಕರಿಸುವ ಮೂಲಕ ಈ ಭಾಗದ ಜನರ ಭಾವನೆಗಳಿಗೆ ಧಕ್ಕೆ ಉಂಟಾಗಿದೆ. ಇದೇ ಪರಿಸ್ಥಿತಿ ಮುಂದುವರಿದರೆ ಉತ್ತರ ಕರ್ನಾಟಕವನ್ನು ಪ್ರತ್ಯೇಕ ರಾಜ್ಯವನ್ನಾಗಿ ಘೋಷಿಸಿ ಸಮಗ್ರ ಅಭಿವೃದ್ಧಿಗೆ ಕ್ರಮ ಕೈಗೊಳ್ಳಬೇಕು ಎಂದು ಸದಸ್ಯರು ಆಗ್ರಹಿಸಿದರು.

ಈ ಸಂದರ್ಭದಲ್ಲಿ ನಗರಸಭೆ ಸದಸ್ಯರಾದ ಕೃಷ್ಣಾ ಪರಾಪೂರ, ಸುರೇಶ ಕಟ್ಟಿಮನಿ, ಬರಕತಅಲಿ ಮುಲ್ಲಾ, ರವಿ ಕಮತರ, ಚಂದ್ರು ಕರಿಸೋಮನಗೌಡ್ರ, ಇಮ್ತಿಯಾಜ ಶಿರಹಟ್ಟಿ, ಪದ್ಮಾ ಕಟಗಿ, ಪರವೀನಬಾನು ಮುಲ್ಲಾ, ಶಕುಂತಲಾ ಅಕ್ಕಿ, ಜೈನುದ್ದೀನ್ ನಮಾಜಿ ಸೇರಿದಂತೆ ಕಾಂಗ್ರೆಸ್ ಕಾರ್ಯಕರ್ತರು ಉಪಸ್ಥಿತರಿದ್ದರು.



## ಹಳೇ ಡಿಸಿ ಕಚೇರಿ ವೃತ್ತದಲ್ಲಿ ಬೃಹತ್ ಪ್ರತಿಭಟನೆ

ಎಚ್.ಕೆ. ಪಾಟೀಲ ಅವರಿಗೆ ಸಚಿವ ಸ್ಥಾನ ಕೈತಪ್ಪಿದ ಹಿನ್ನೆಲೆಯಲ್ಲಿ ಜಿಲ್ಲಾ ಕಾಂಗ್ರೆಸ್ ಕಾರ್ಯಕರ್ತರು ನಗರದ ಹಳೇ ಜಿಲ್ಲಾಧಿಕಾರಿ ಕಚೇರಿ ವೃತ್ತದಲ್ಲಿ ಬೃಹತ್ ಪ್ರತಿಭಟನೆ ನಡೆಸಿದರು.

ಮಾನವ ಸರಪಳಿ ನಿರ್ಮಿಸಿ ಕೆಲಕಾಲ ವಾಹನ ಸಂಚಾರ ಸ್ಥಗಿತಗೊಳಿಸಿದ ಪ್ರತಿಭಟನಾಕಾರರು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಹಾಗೂ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಹಿರಿಯ ನಾಯಕ ಎಚ್.ಕೆ. ಪಾಟೀಲ ಅವರಿಗೆ ಸಚಿವ ಸ್ಥಾನ ನೀಡಿ ನ್ಯಾಯ ಒದಗಿಸುವಂತೆ ಒತ್ತಾಯಿಸಿದರು.

### ಆ. 6ರಂದು ಬಾಕಿ ಪ್ರಕರಣಗಳ ವಿಚಾರಣೆ; ಆ. 7ರಂದು ಸರ್ಕಾರಿ ಕಚೇರಿಗಳಿಗೆ ಅನಿರೀಕ್ಷಿತ ಭೇಟಿ

## ಗದಗ ಜಿಲ್ಲೆಗೆ ಉಪಲೋಕಾಯುಕ್ತ ನ್ಯಾ. ಫಣೀಂದ್ರ ಭೇಟಿ

**ವಿಜಯಸಾಕ್ಷಿ ಸುದ್ದಿ, ಗದಗ**



ಕರ್ನಾಟಕ ಉಪಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ ಅವರು ಆಗಸ್ಟ್ 6 ಮತ್ತು 7ರಂದು ಗದಗ ಜಿಲ್ಲೆಗೆ ಪ್ರವಾಸ ಕೈಗೊಳ್ಳಲಿದ್ದು, ಈಗಾಗಲೇ ಲೋಕಾಯುಕ್ತ ಸಂಸ್ಥೆಯಲ್ಲಿ ದಾಖಲಾಗಿರುವ ದೂರುಗಳ ವಿಚಾರಣೆ ಹಾಗೂ ಪ್ರಕರಣಗಳ ವಿಲೇವಾರಿಗೆ ಸಂಬಂಧಿಸಿದ ಸಭೆ ನಡೆಸಲಿದ್ದಾರೆ. ಆಗಸ್ಟ್ 6ರಂದು ಬೆಳಿಗ್ಗೆ 10ರಿಂದ ಮಧ್ಯಾಹ್ನ 1.30ರವರೆಗೆ ಹಾಗೂ ಮಧ್ಯಾಹ್ನ 2.30ರಿಂದ ಸಂಜೆ 5ರವರೆಗೆ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ಪ್ರಕರಣಗಳ ವಿಚಾರಣೆ ನಡೆಯಲಿದೆ. ಈ ಸಂದರ್ಭದಲ್ಲಿ ಹೊಸ ದೂರುಗಳನ್ನು ಸ್ವೀಕರಿಸಲಾಗುವುದಿಲ್ಲ ಎಂದು ಲೋಕಾಯುಕ್ತ ಕಚೇರಿ ಸ್ಪಷ್ಟಪಡಿಸಿದೆ. ಆಗಸ್ಟ್ 7ರಂದು ಉಪಲೋಕಾಯುಕ್ತರು ಜಿಲ್ಲೆಯ ವಿವಿಧ ಸರ್ಕಾರಿ ಕಚೇರಿಗಳಿಗೆ ಅನಿರೀಕ್ಷಿತ ಭೇಟಿ ನೀಡಿ ಪರಿಶೀಲನೆ ಹಾಗೂ ವಿಚಾರಣೆ ನಡೆಸಲಿದ್ದಾರೆ ಎಂದು ಕರ್ನಾಟಕ ಲೋಕಾಯುಕ್ತ ಗದಗ ಕಚೇರಿಯ ಪೊಲೀಸ್ ಉಪಾಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ಉದ್ಯೋಗ ಮೇಳ: ಅಭ್ಯರ್ಥಿಗಳಿಗೆ ನೇರ ಸಂದರ್ಶನ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಆಗಸ್ಟ್ 5ರಂದು ಬೆಳಿಗ್ಗೆ 10 ಗಂಟೆಗೆ ನಗರದ ವಿವೇಕಾನಂದ ನಗರ, ಕೆಎಚ್‌ಬಿ ಕಾಲೋನಿಯ ಸಾಯಿಬಾಬಾ ದೇವಸ್ಥಾನದ ಹಿಂಭಾಗದಲ್ಲಿರುವ ಕಚೇರಿಯಲ್ಲಿ ನೇರ ಸಂದರ್ಶನ (ಉದ್ಯೋಗ ಮೇಳ) ಆಯೋಜಿಸಲಾಗಿದೆ. ಗದಗದ ಸ್ವತಂತ್ರ ಮೈಕ್ರೋಫಿನ್ ಪ್ರೈವೇಟ್ ಲಿಮಿಟೆಡ್ ಸಂಸ್ಥೆ ಕ್ಷೇತ್ರಾಧಿಕಾರಿ ಹುದ್ದೆಗಳಿಗೆ ನೇಮಕಾತಿ ನಡೆಸಲಿದ್ದು, ಎಸ್‌ಎಸ್‌ಎಲ್‌ಸಿ, ಪಿಯುಸಿ, ಐಟಿಐ ಹಾಗೂ ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರುವ 18ರಿಂದ 35 ವರ್ಷದೊಳಗಿನ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳು ಭಾಗವಹಿಸಬಹುದು. ಆಯ್ಕೆಯಾದ ಅಭ್ಯರ್ಥಿಗಳಿಗೆ ಶಿರಹಟ್ಟಿ, ಮುಂಡರಗಿ, ಅಣ್ಣಿಗೇರಿ, ಬೆಟಗೇರಿ, ನವಲಗುಂದ, ಕುಂದಗೋಳ, ಧಾರವಾಡ ಹಾಗೂ ಸವದತ್ತಿ ಪ್ರದೇಶಗಳಲ್ಲಿ ಕರ್ತವ್ಯ ನಿರ್ವಹಿಸಬೇಕಿದ್ದು, ದ್ವಿಚಕ್ರ ವಾಹನ ಹಾಗೂ ಚಾಲನಾ ಪರವಾನಗಿ ಹೊಂದಿರುವುದು ಕಡ್ಡಾಯವಾಗಿದೆ. ಅಭ್ಯರ್ಥಿಗಳು ವಿದ್ಯಾರ್ಹತೆ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿಗಳು, ಎರಡು ಬಯೋಡಾಟಾ, ಆಧಾರ್ ಕಾರ್ಡ್ ಜೆರಾಕ್ಸ್‌ನೊಂದಿಗೆ ಹಾಜರಾಗಬೇಕು. ನೇರ ಸಂದರ್ಶನದಲ್ಲಿ ಭಾಗವಹಿಸುವವರಿಗೆ ಸ್ಥಳದಲ್ಲೇ ನೋಂದಣಿ ಕಡ್ಡಾಯವಾಗಿದೆ. ಯುವನಿಧಿ ಯೋಜನೆಯ ಫಲಾನುಭವಿಗಳು ಕಡ್ಡಾಯವಾಗಿ ಈ ಉದ್ಯೋಗ ಮೇಳದಲ್ಲಿ ಪಾಲ್ಗೊಳ್ಳಬೇಕು ಎಂದು ಜಿಲ್ಲಾ ಉದ್ಯೋಗಾಧಿಕಾರಿ ಬಸವಂತ ಪಿ.ಎನ್. ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ 98806 90167 ಅಥವಾ 63633 30688 ಸಂಖ್ಯೆಗೆ ಸಂಪರ್ಕಿಸಬಹುದು.

## ಗದಗ ಜಿಲ್ಲೆಗೆ ₹78 ಕೋಟಿ ಬೆಳೆ ವಿಮೆ ಪರಿಹಾರ ಬಿಡುಗಡೆ

**ವಿಜಯಸಾಕ್ಷಿ ಸುದ್ದಿ, ಗದಗ**

2025-26ನೇ ಸಾಲಿನ ಮುಂಗಾರು ಹಂಗಾಮಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆ ಅಡಿಯಲ್ಲಿ ಗದಗ ಜಿಲ್ಲೆಯ ರೈತರಿಗೆ ₹78 ಕೋಟಿ ಬೆಳೆ ವಿಮೆ ಪರಿಹಾರ ಮಂಜೂರಾಗಿದೆ. ಹತ್ತಿ, ಶೇಂಗಾ, ಮೆಕ್ಕೆಜೋಳ, ಈರುಳ್ಳಿ, ತೊಗರಿ, ಭತ್ತ ಹಾಗೂ ಸಜ್ಜೆ ಬೆಳೆಗಳಿಗೆ ಬೆಳೆ ಕಟಾವು ಆಧಾರಿತ ವಿಮೆ ಪರಿಹಾರವನ್ನು ಸರ್ಕಾರ ಬಿಡುಗಡೆ ಮಾಡಿದ್ದು, ಅರ್ಹ ರೈತರ ಬ್ಯಾಂಕ್ ಖಾತೆಗಳಿಗೆ ನೇರವಾಗಿ ಹಣ ಜಮೆಯಾಗಲಿದೆ ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಒಳಬೇಗುದಿ ತಾರಕಕ್ಕೇರಿದೆ ಎಂದ ಸಿ.ಸಿ. ಪಾಟೀಲ; ಗದಗ ಜಿಲ್ಲೆಗೆ ಸಚಿವ ಸ್ಥಾನ ತಪ್ಪಿದ್ದಕ್ಕೂ ಬೇಸರ

# ಕಾಂಗ್ರೆಸ್ ಸರ್ಕಾರ ಯಾವಾಗ ಬೇಕಾದರೂ ಬೀಳಬಹುದು


**ವಿಜಯಸಾಕ್ಷಿ ಸುದ್ದಿ, ಗದಗ**

ಕಾಂಗ್ರೆಸ್‌ನಲ್ಲಿ ದಿನದಿಂದ ದಿನಕ್ಕೆ ಒಳಬೇಗುದಿ ಹೆಚ್ಚಾಗುತ್ತಿದ್ದು, ಸಂಪುಟ ವಿಸ್ತರಣೆಯ ಬಳಿಕ ಅಸಮಾಧಾನ ತಾರಕಕ್ಕೇರಿದೆ. ಸರ್ಕಾರ ಯಾವಾಗ ಬೇಕಾದರೂ ಪತನಗೊಂಡು ಚುನಾವಣೆ ಎದುರಾಗುವ ಸಾಧ್ಯತೆ ಇದೆ ಎಂದು ನರಗುಂದ ಶಾಸಕ ಸಿ.ಸಿ. ಪಾಟೀಲ ಭವಿಷ್ಯ ನುಡಿದರು.

ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಂಪುಟ ವಿಸ್ತರಣೆ ಪ್ರಮಾಣವಚನ ಸಮಾರಂಭಕ್ಕೂ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಗೈರಾಗಿರುವುದು ಕಾಂಗ್ರೆಸ್‌ನ ಒಳಜಗಳಕ್ಕೆ ಸಾಕ್ಷಿಯಾಗಿದೆ. ಕಾಂಗ್ರೆಸ್‌ನಲ್ಲಿ ವೇಣುಗೋಪಾಲ್, ರಣದೀಪ್ ಸಿಂಗ್ ಸುರ್ಜೇವಾಲ, ಸಿದ್ದರಾಮಯ್ಯ ಹಾಗೂ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ನೇತೃತ್ವದಲ್ಲಿ ನಾಲ್ಕು ಬಣಗಳು ಸೃಷ್ಟಿಯಾಗಿದ್ದು, ಸರ್ಕಾರವೇ ಸಮ್ಮಿಶ್ರ ಸರ್ಕಾರದಂತೆ ಕಾಣುತ್ತಿದೆ ಎಂದು ಟೀಕಿಸಿದರು.

ಸಚಿವ ಸಂಪುಟದ ಪಟ್ಟಿಯಲ್ಲಿ ಪ್ರಕಟವಾಗಿದ್ದ ಇಬ್ಬರ ಹೆಸರನ್ನು ಕೈಬಿಟ್ಟು ಮತ್ತೊಬ್ಬರಿಗೆ ಅವಕಾಶ ನೀಡಲಾಗಿದೆ. ಈ ಬದಲಾವಣೆ ಯಾರ ಒತ್ತಡಕ್ಕೆ ನಡೆದಿದೆ ಎಂಬುದನ್ನು ಕಾಂಗ್ರೆಸ್ ಹೈಕಮಾಂಡ್ ಬಹಿರಂಗಪಡಿಸಬೇಕು ಎಂದು ಆಗ್ರಹಿಸಿದರು.

ಮಹಿಳಾ ಪ್ರಾತಿನಿಧ್ಯದ ಕುರಿತು ಕಾಂಗ್ರೆಸ್ ಮಾತು ಮತ್ತು ಕೃತ್ಯದಲ್ಲಿ ವ್ಯತ್ಯಾಸವಿದೆ. ಲೋಕಸಭೆಯಲ್ಲಿ ಮಹಿಳಾ ಮೀಸಲಾತಿ ಮಸೂದೆಯನ್ನು ವಿರೋಧಿಸಿದ್ದ ಕಾಂಗ್ರೆಸ್, ಇದೀಗ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರ ಸಂಪುಟದಲ್ಲೂ ಒಬ್ಬ ಮಹಿಳೆಗೂ ಸಚಿವ ಸ್ಥಾನ ನೀಡಿಲ್ಲ ಎಂದು ಆರೋಪಿಸಿದರು.





ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರ ಹೇಳಿಕೆಗಳನ್ನು ವ್ಯಂಗ್ಯವಾಡಿದ ಅವರು, ಗ್ರಾಮ ಪಂಚಾಯಿತಿ ಚುನಾವಣೆಯನ್ನೂ ಎದುರಿಸದವರಿಗೆ ಪಕ್ಷದ ಉನ್ನತ ಹುದ್ದೆ ನೀಡಲಾಗಿದೆ. ತಮ್ಮ ಜವಾಬ್ದಾರಿಯ ಅರಿವಿನಿಂದ ಮಾತನಾಡಬೇಕು ಎಂದು ಹೇಳಿದರು. ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧವೂ ವಾಗ್ದಾಳಿ ನಡೆಸಿದ ಸಿ.ಸಿ. ಪಾಟೀಲ, ತಮ್ಮ ಇಲಾಖೆಯ ಕೆಲಸ ಬಿಟ್ಟು ಅನಗತ್ಯ ರಾಜಕಾರಣದಲ್ಲಿ ತೊಡಗಿದ್ದಾರೆ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದ್ದು, ಇಸ್ಪೀಟ್, ಮರಳು ಹಾಗೂ ಡ್ರಗ್ಸ್ ದಂಧೆ ಹೆಚ್ಚಾಗಿರುವುದನ್ನು ತಡೆಯುವತ್ತ ಗಮನ ಹರಿಸಬೇಕು ಎಂದು ಒತ್ತಾಯಿಸಿದರು.

ಜಿಲ್ಲೆಗೆ ಸಚಿವ ಸ್ಥಾನ ಸಿಗದಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಪಕ್ಷ ಯಾವುದೇ ಇರಲಿ, ಗದಗ ಜಿಲ್ಲೆಗೆ ಒಬ್ಬ ಸಚಿವ ಇರಬೇಕು. ಸಚಿವರಿಲ್ಲದಿದ್ದರೆ ಅಧಿಕಾರಿಗಳ ಮೇಲೆ ನಿಯಂತ್ರಣ ಕಡಿಮೆಯಾಗಿ ಜಿಲ್ಲೆಯ ಅಭಿವೃದ್ಧಿಗೆ ಹಿನ್ನಡೆಯಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಸುದ್ದಿಗೋಷ್ಠಿಯಲ್ಲಿ ರಾಜು ಕುರಡಗಿ, ಎಂ.ಎಸ್. ಕರೀಗೌಡರ, ಉಷಾ ದಾಸರ, ಎಮ್.ಎಮ್. ಹಿರೇಮಠ, ಲಿಂಗಾರಾಜ ಪಾಟೀಲ, ಮಂಜುನಾಥ ಮುಳಗುಂದ, ಅನಿಲ ಅಬ್ಬಿಗೇರಿ ಹಾಗೂ ಗೂಳಪ್ಪ ಮುಷಿಗೇರಿ ಉಪಸ್ಥಿತರಿದ್ದರು.

> **ಕಾಂಗ್ರೆಸ್‌ನಲ್ಲಿ ಅಸಮಾಧಾನದ ಹೊಗೆ ದಟ್ಟವಾಗಿದೆ. ಸರ್ಕಾರ ಯಾವಾಗ ಬೇಕಾದರೂ ಬೀಳುವ ಪರಿಸ್ಥಿತಿ ನಿರ್ಮಾಣವಾಗಿದೆ.**
> - **ಸಿ.ಸಿ. ಪಾಟೀಲ**, ನರಗುಂದ ಶಾಸಕ

## ಆ. 8ರಂದು ಗದಗದಲ್ಲಿ ಸಂಗೀತ ಸಂಜೆ



**ವಿಜಯಸಾಕ್ಷಿ ಸುದ್ದಿ, ಗದಗ**

ಗಾನಲಹರಿ ಸಾಂಸ್ಕೃತಿಕ ಕಲಾ ಸಂಸ್ಥೆ, ಹಾವೇರಿ ಹಾಗೂ ಅಜೆಯ ಮ್ಯೂಜಿಕಲ್ ಅಕಾಡೆಮಿ, ಕೊಪ್ಪಳ ಇವರ ಸಹಯೋಗದಲ್ಲಿ ಆಗಸ್ಟ್ 8ರಂದು ಸಂಜೆ ನಗರದ ಭೀಮಸೇನ ಜೋಷಿ ರಂಗಮಂದಿರದಲ್ಲಿ ಸಂಗೀತ ಸಂಜೆ ಕಾರ್ಯಕ್ರಮ ಆಯೋಜಿಸಲಾಗಿದ್ದು, ಕನ್ನಡ ಚಿತ್ರರಂಗದ ಹಿರಿಯ ನಟ ಡಾ. ಶ್ರೀನಾಥ್ ಮುಖ್ಯ ಅತಿಥಿಯಾಗಿ ಆಗಮಿಸಲಿದ್ದಾರೆ ಎಂದು ಸಂಸ್ಥೆಯ ಅಧ್ಯಕ್ಷೆ ಶೀಲಾ ಪಾಟೀಲ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾರ್ಯಕ್ರಮದ ಸಾನ್ನಿಧ್ಯವನ್ನು ಪ.ಪೂ. ಡಾ. ಕಲ್ಲಯ್ಯಜ್ಜನವರು ಹಾಗೂ ಪ.ಪೂ. ಶಿವಶಾಂತವೀರ ಶರಣರು ವಹಿಸಲಿದ್ದು, ಫೀರಸಾಬ್ ಕೌತಾಳ್ ಉದ್ಘಾಟನೆ ನೆರವೇರಿಸಲಿದ್ದಾರೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶೀಲಾ ವೀರನಗೌಡ ಪಾಟೀಲ ವಹಿಸಲಿದ್ದಾರೆ ಎಂದರು. ಮುಖ್ಯ ಅತಿಥಿಗಳಾಗಿ ಶಾಸಕರಾದ ಡಾ. ಎಚ್.ಕೆ. ಪಾಟೀಲ, ಜಿ.ಎಸ್. ಪಾಟೀಲ, ಸಿ.ಸಿ. ಪಾಟೀಲ, ಮುಖಂಡರಾದ ಸಚಿನ್ ಪಾಟೀಲ, ರಾಜಶೇಖರ ಕಲ್ಲೂರ, ಡಾ. ಬಸವರಾಜ ಬಳ್ಳಾರಿ, ಗವಿಸಿದ್ದಪ್ಪ ಪಲ್ಲೇದ, ಡಾ. ಶ್ರೀಧರ ಕುರಡಗಿ, ಸಿದ್ದರಾಮೇಶ್ವರ ಗಡೇದ, ವಿಜಯಕುಮಾರ ಗಡ್ಡಿ, ಇಮಾಮ್ ಮೊರಬದ ಸೇರಿದಂತೆ ಹಲವರು ಭಾಗವಹಿಸಲಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಅಮರ ಜವಳಿ ಹಾಗೂ ಶಶಾಂಕ್ ಗಜಾಕೋಶ ಉಪಸ್ಥಿತರಿದ್ದರು.

## ಬರ ಪರಿಶೀಲನೆಗೆ ಸಚಿವ ಸಂತೋಷ ಲಾಡ್ ಜಿಲ್ಲಾ ಪ್ರವಾಸ

**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಸಂಪುಟ ದರ್ಜೆ ಸಚಿವ ಸಂತೋಷ ಎಸ್. ಲಾಡ್ ಅವರು ಆಗಸ್ಟ್ 5ರಿಂದ 7ರವರೆಗೆ ಧಾರವಾಡ ಜಿಲ್ಲಾ ಪ್ರವಾಸ ಕೈಗೊಂಡು ಬರ ಹಾಗೂ ಅತಿವೃಷ್ಟಿ ಪರಿಸ್ಥಿತಿ ಪರಿಶೀಲನೆ ನಡೆಸಲಿದ್ದಾರೆ.

ಆಗಸ್ಟ್ 5ರಂದು ಬೆಳಿಗ್ಗೆ 10.15ಕ್ಕೆ ಕಲಘಟಗಿ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ತಾಲೂಕು ಮಟ್ಟದ ಅಭಿವೃದ್ಧಿ ಕಾರ್ಯಕ್ರಮಗಳ ಪ್ರಗತಿ ಪರಿಶೀಲನೆ ನಡೆಸಲಿದ್ದು, ಅತಿವೃಷ್ಟಿ ಹಾಗೂ ಬರ ಪರಿಸ್ಥಿತಿ ಕುರಿತು ಅಧಿಕಾರಿಗಳೊಂದಿಗೆ ಸಭೆ ನಡೆಸಲಿದ್ದಾರೆ. ಬಳಿಕ ಕಲಘಟಗಿ ವಿಧಾನಸಭಾ ಕ್ಷೇತ್ರದ ವಿವಿಧ ಗ್ರಾಮಗಳಿಗೆ ಭೇಟಿ ನೀಡಿ ಪರಿಸ್ಥಿತಿಯ ಅವಲೋಕನ ಮಾಡಲಿದ್ದಾರೆ.



ಅದೇ ದಿನ ಮಧ್ಯಾಹ್ನ 3 ಗಂಟೆಗೆ ಧಾರವಾಡ ಜಿಲ್ಲಾಧಿಕಾರಿ ಕಚೇರಿಯಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಅತಿವೃಷ್ಟಿ ಹಾಗೂ ಬರ ಪರಿಸ್ಥಿತಿ ಕುರಿತು ಸಮಗ್ರ ಚರ್ಚೆ ನಡೆಸಲಿದ್ದಾರೆ.

ಆಗಸ್ಟ್ 6ರಂದು ಬೆಳಿಗ್ಗೆ 11 ಗಂಟೆಗೆ ನವಲಗುಂದ ವಿಧಾನಸಭಾ ಕ್ಷೇತ್ರದ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಪರಿಸ್ಥಿತಿ ಪರಿಶೀಲಿಸಲಿದ್ದು, ನಂತರ ವಿವಿಧ ಗ್ರಾಮಗಳಿಗೆ ಭೇಟಿ ನೀಡಲಿದ್ದಾರೆ. ಮಧ್ಯಾಹ್ನ 4 ಗಂಟೆಗೆ ಕುಂದಗೋಳ ವಿಧಾನಸಭಾ ಕ್ಷೇತ್ರದಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಬರ ಹಾಗೂ ಅತಿವೃಷ್ಟಿ ಕುರಿತು ಚರ್ಚಿಸಿ ಗ್ರಾಮಗಳಿಗೂ ಭೇಟಿ ನೀಡಲಿದ್ದಾರೆ.

ಆಗಸ್ಟ್ 7ರಂದು ಬೆಳಿಗ್ಗೆ 11.30ಕ್ಕೆ ಅಳ್ನಾವರ ತಾಲೂಕಿನ ವಿವಿಧ ಗ್ರಾಮಗಳಿಗೆ ಭೇಟಿ ನೀಡಿ ಅತಿವೃಷ್ಟಿ ಹಾಗೂ ಬರ ಪರಿಸ್ಥಿತಿ ಕುರಿತು ಸ್ಥಳ ಪರಿಶೀಲನೆ ನಡೆಸಲಿದ್ದಾರೆ ಎಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಡರಕಟ್ಟಿ ರೈತರ ಗೋಳು ಕೇಳಿದ ಜಿಲ್ಲಾಡಳಿತ!



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸುಮಾರು 15-20 ವರ್ಷಗಳಿಂದ ಚರಂಡಿ ನೀರು ನಿಂತು 160ಕ್ಕೂ ಹೆಚ್ಚು ಎಕರೆ ಫಲವತ್ತಾದ ಕೃಷಿಭೂಮಿ ಹಾಳಾಗಿರುವ ಅಡರಕಟ್ಟಿ ಗ್ರಾಮದ ಸಮಸ್ಯೆಗೆ ಕೊನೆಗೂ ಜಿಲ್ಲಾಡಳಿತ ಸ್ಪಂದಿಸಿದೆ. ರೈತರು ಒಂದು ವಾರದ ಗಡುವು ನೀಡಿ ಹೋರಾಟದ ಎಚ್ಚರಿಕೆ ನೀಡಿದ ಬೆನ್ನಲ್ಲೇ ಗದಗ ಉಪವಿಭಾಗಾಧಿಕಾರಿ ಹಾಗೂ ಪುರಸಭೆ ಆಡಳಿತಾಧಿಕಾರಿ ಗಂಗಪ್ಪ ಎಂ. ಮಂಗಳವಾರ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಪುರಸಭೆ ಮುಖ್ಯಾಧಿಕಾರಿ ಪರಶುರಾಮ ಗುಡದಾರಿ ಅವರೊಂದಿಗೆ ಗದಗ ನಾಕಾ ಬಳಿಯ ಲಂಡಿ ಹಳ್ಳದಿಂದ ಹರಿದುಬರುವ ಚರಂಡಿ ನೀರನ್ನು ವೀಕ್ಷಿಸಿದ ಉಪವಿಭಾಗಾಧಿಕಾರಿಗಳು, ಬಳಿಕ ಅಡರಕಟ್ಟಿ ಗ್ರಾಮಕ್ಕೆ ತೆರಳಿ ಜವುಳು ಬೆಳೆದು ನಿರುಪಯುಕ್ತವಾಗಿರುವ ಕೃಷಿಭೂಮಿಗಳನ್ನು ಪರಿಶೀಲಿಸಿ ರೈತರ ಅಹವಾಲು ಆಲಿಸಿದರು.

ರೈತರು, ತಾತ್ಕಾಲಿಕ ಕಾಮಗಾರಿ ಬದಲಾಗಿ ಶಾಶ್ವತ ಪರಿಹಾರ ಕಲ್ಪಿಸಬೇಕು. ಲಂಡಿ ಹಳ್ಳದಿಂದ ಪೈಪ್‌ಲೈನ್ ಅಳವಡಿಸಿ ಚರಂಡಿ ನೀರನ್ನು ಡಬ್ಬಾಡುಬ್ಬಿ ಹಳ್ಳಕ್ಕೆ ಹರಿಸುವ ಯೋಜನೆ ಜಾರಿಗೊಳಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಆರೋಗ್ಯ ನಿರೀಕ್ಷಕ ಮಂಜುನಾಥ ಮುದಗಲ್, ಹನುಮಂತ ನಂದೆಣ್ಣವರ ಹಾಗೂ ರೈತರಾದ ಸಿದ್ದಣ್ಣ ಹವಳದ, ಮುತ್ತಣ್ಣ ಗಡೆಪ್ಪನವರ, ಚನ್ನಬಸಪ್ಪ ಹಳೆಮನಿ, ಗಂಗನಗೌಡ್ರ ಪಾಟೀಲ, ಯಲ್ಲಪ್ಪ ಗಡೆಪ್ಪನವರ, ಮಾಂತೇಶ ಲಿಂಗಶೆಟ್ಟಿ, ಮೌನೇಶ ಗಡೆಪ್ಪನವರ, ಚಂದ್ರು ಮಾಗಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

> **ಆಗಸ್ಟ್ 16ರ ನಂತರ ಸಂಬಂಧಿಸಿದ ಅಧಿಕಾರಿಗಳು, ಇಂಜಿನಿಯರ್‌ಗಳು ಹಾಗೂ ರೈತರ ಸಭೆ ನಡೆಸಿ ಎರಡು-ಮೂರು ಶಾಶ್ವತ ಯೋಜನೆಗಳ ರೂಪುರೇಷೆ ಸಿದ್ಧಪಡಿಸಿ. ಅಮೃತ್-2 ಯೋಜನೆಯಡಿ ಸಾಧ್ಯವಾದರೆ ಕಾಮಗಾರಿ ಕೈಗೆತ್ತಿಕೊಳ್ಳಲಾಗುವುದು. ರೈತರ ಸಮಸ್ಯೆ ಬಗೆಹರಿಸಲು ವಿಶೇಷ ಕಾಳಜಿ ವಹಿಸುತ್ತೇವೆ.**
> - **ಗಂಗಪ್ಪ ಎಂ.**, ಉಪವಿಭಾಗಾಧಿಕಾರಿ

## ಮುಪ್ಪಿನ ಬಸವಲಿಂಗ ಶ್ರೀಗಳ ಪುರ ಪ್ರವೇಶ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ದೇವಪ್ರಯಾಗದಲ್ಲಿ ಮೌನಾನುಷ್ಠಾನ ಪೂರ್ಣಗೊಳಿಸಿ ಹಾಲಕೆರೆ ಗ್ರಾಮಕ್ಕೆ ಆಗಮಿಸಿದ ಶ್ರೀ ಅನ್ನದಾನೇಶ್ವರ ಮಠದ ಪೀಠಾಧಿಪತಿ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳವರಿಗೆ ಭಕ್ತರು ಅದ್ಧೂರಿ ಪುರ ಪ್ರವೇಶದ ಮೂಲಕ ಆತ್ಮೀಯ ಸ್ವಾಗತ ಕೋರಿದರು. ಅಲಂಕೃತ ಸಾರೋಟಿನಲ್ಲಿ ಶ್ರೀಗಳನ್ನು ಕೂರಿಸಿ, ವಾದ್ಯಮೇಳ ಹಾಗೂ ಜಯಘೋಷಗಳ ನಡುವೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಭವ್ಯ ಮೆರವಣಿಗೆ ನಡೆಸಲಾಯಿತು. ಮೆರವಣಿಗೆ ಸಾಗುವ ಮಾರ್ಗದುದ್ದಕ್ಕೂ ಶ್ರೀಗಳು ಭಕ್ತರಿಗೆ ಆಶೀರ್ವಾದ ನೀಡಿದರೆ, ಭಕ್ತರು ಪುಷ್ಪಾರ್ಚನೆ ಮಾಡಿ ಭಕ್ತಿಭಾವದಿಂದ ಸ್ವಾಗತಿಸಿದರು.

ಬಳಿಕ ಶ್ರೀಗಳನ್ನು ಅನ್ನದಾನೇಶ್ವರ ಮಠಕ್ಕೆ ಕರೆದೊಯ್ದು ವಿಶೇಷ ಪೂಜೆ ಹಾಗೂ ಧಾರ್ಮಿಕ ಕಾರ್ಯಕ್ರಮಗಳನ್ನು ನೆರವೇರಿಸಲಾಯಿತು. ಮೆರವಣಿಗೆಯಲ್ಲಿ ನಾಡಿನ ವಿವಿಧ ಮಠಾಧೀಶರು, ಗಿರೀಶಗೌಡ ಮುಲ್ಕಿಪಾಟೀಲ, ರಾಜಶೇಖರಗೌಡ ಪಾಟೀಲ, ರವೀಂದ್ರನಾಥ ದೊಡ್ಡಮೇಟಿ, ಡಾ. ಜಿ.ಕೆ. ಕಾಳೆ, ಉಮೇಶ ಪಾಟೀಲ ಸೇರಿದಂತೆ ವಿವಿಧ ಮಠಗಳ ಸ್ವಾಮೀಜಿಗಳು, ಗಣ್ಯರು, ಶ್ರೀಮಠದ ಭಕ್ತರು ಹಾಗೂ ಅನ್ನದಾನೇಶ್ವರ ವಿದ್ಯಾಸಂಸ್ಥೆಗಳ ಸಿಬ್ಬಂದಿ, ಸಾವಿರಾರು ಭಕ್ತರು ಭಾಗವಹಿಸಿದ್ದರು.

### 40 ವರ್ಷಗಳ ಯಶಸ್ವಿ ಪಯಣದ ಸಂಭ್ರಮ; ಗದಗದಲ್ಲೂ ಸ್ಥಾಪನಾ ದಿನಾಚರಣೆ

# ಗ್ರಾಮೀಣ ಪ್ರತಿಭೆಯ ಗಟ್ಟಿಮನೆ ನವೋದಯ



**ವಿಜಯಸಾಕ್ಷಿ ಸುದ್ದಿ, ಗದಗ**

ಗ್ರಾಮೀಣ ಪ್ರತಿಭೆಗಳಿಗೆ ಗುಣಮಟ್ಟದ ಶಿಕ್ಷಣ ನೀಡಿ ರಾಷ್ಟ್ರ ನಿರ್ಮಾಣದ ಕನಸಿನೊಂದಿಗೆ 1986ರಲ್ಲಿ ಆರಂಭವಾದ ಜವಾಹರ ನವೋದಯ ವಿದ್ಯಾಲಯ ಸಮಿತಿ (ಎನ್‌ವಿಎಸ್) ನಾಲ್ಕು ದಶಕಗಳ ಸಾರ್ಥಕ ಪಯಣ ಪೂರ್ಣಗೊಳಿಸಿದ್ದು, ಆಗಸ್ಟ್ 5ರಂದು ದೇಶಾದ್ಯಂತ 40ನೇ ಸ್ಥಾಪನಾ ದಿನವನ್ನು ಸಂಭ್ರಮದಿಂದ ಆಚರಿಸಲಾಗುತ್ತಿದೆ.


ಪ್ರಸ್ತುತ ತಮಿಳುನಾಡು ಹೊರತುಪಡಿಸಿ ದೇಶದಾದ್ಯಂತ 660ಕ್ಕೂ ಹೆಚ್ಚು ಜವಾಹರ ನವೋದಯ ವಿದ್ಯಾಲಯಗಳು ಕಾರ್ಯನಿರ್ವಹಿಸುತ್ತಿದ್ದು, ಪ್ರತಿವರ್ಷ ಮೂರು ಲಕ್ಷಕ್ಕೂ ಅಧಿಕ ವಿದ್ಯಾರ್ಥಿಗಳಿಗೆ ಸಂಪೂರ್ಣ ಉಚಿತ ಶಿಕ್ಷಣ, ವಸತಿ, ಆಹಾರ ಹಾಗೂ ಸಮಗ್ರ ವ್ಯಕ್ತಿತ್ವ ವಿಕಸನದ ಅವಕಾಶ ಕಲ್ಪಿಸಲಾಗುತ್ತಿದೆ. ಸಿಬಿಎಸ್‌ಇ 10 ಹಾಗೂ 12ನೇ ತರಗತಿ ಪರೀಕ್ಷೆಗಳಲ್ಲಿ ನಿರಂತರವಾಗಿ ಶೇ.98ರಿಂದ 99ರಷ್ಟು ಫಲಿತಾಂಶ ದಾಖಲಿಸುವ ಮೂಲಕ ನವೋದಯ ಶಾಲೆಗಳು ದೇಶದ ಶ್ರೇಷ್ಠ ಶಿಕ್ಷಣ ಸಂಸ್ಥೆಗಳಾಗಿ ಗುರುತಿಸಿಕೊಂಡಿವೆ. ಕಳೆದ ನಾಲ್ಕು ದಶಕಗಳಲ್ಲಿ ಲಕ್ಷಾಂತರ ನವೋದಯ ಹಳೆಯ ವಿದ್ಯಾರ್ಥಿಗಳು ಐಎಎಸ್, ಐಪಿಎಸ್, ಐಎಫ್‌ಎಸ್ ಸೇರಿದಂತೆ ನಾಗರಿಕ ಸೇವೆಗಳು, ಇಸ್ರೋ, ಡಿಆರ್‌ಡಿಒ, ಬಾರ್ಕ್, ಎಚ್‌ಎಎಲ್, ಬೆಲ್ ಸೇರಿದಂತೆ ವಿವಿಧ ರಾಷ್ಟ್ರೀಯ ಸಂಸ್ಥೆಗಳು ಹಾಗೂ ಗೂಗಲ್, ಮೈಕ್ರೋಸಾಫ್ಟ್, ಅಮೆಜಾನ್, ಆ್ಯಪಲ್, ಎನ್‌ವಿಡಿಯಾ, ಇನ್ಫೋಸಿಸ್, ಟಿಸಿಎಸ್ ಸೇರಿದಂತೆ ಜಾಗತಿಕ ಕಂಪನಿಗಳಲ್ಲಿ ಉನ್ನತ ಹುದ್ದೆಗಳಲ್ಲಿ ಸೇವೆ ಸಲ್ಲಿಸುವ ಮೂಲಕ ನವೋದಯದ ಹೆಸರನ್ನು ವಿಶ್ವಮಟ್ಟದಲ್ಲಿ ಎತ್ತಿ ಹಿಡಿದಿದ್ದಾರೆ.

**ಗದಗ ನವೋದಯದ ಸಾಧನೆಯ ಪಯಣ**

2000ರಲ್ಲಿ ಆರಂಭವಾದ ಪಿ.ಎಂ. ಶ್ರೀ ಜವಾಹರ ನವೋದಯ ವಿದ್ಯಾಲಯ, ಗದಗ, ಸಾವಿರಾರು ಗ್ರಾಮೀಣ ವಿದ್ಯಾರ್ಥಿಗಳ ಭವಿಷ್ಯ ರೂಪಿಸುವಲ್ಲಿ ಮಹತ್ವದ ಪಾತ್ರ ವಹಿಸಿದೆ. ಶೈಕ್ಷಣಿಕ ಸಾಧನೆ, ಸ್ಪರ್ಧಾತ್ಮಕ ಪರೀಕ್ಷೆಗಳು, ಕ್ರೀಡೆ, ಸಾಂಸ್ಕೃತಿಕ ಚಟುವಟಿಕೆಗಳು ಹಾಗೂ ಮೌಲ್ಯಾಧಾರಿತ ಶಿಕ್ಷಣದ ಮೂಲಕ ಜಿಲ್ಲೆಯ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಯಾಗಿ ಬೆಳೆದಿದೆ. ಇಲ್ಲಿನ ವಿದ್ಯಾರ್ಥಿಗಳು ವೈದ್ಯರು, ಇಂಜಿನಿಯರ್‌ಗಳು, ವಿಜ್ಞಾನಿಗಳು, ಶಿಕ್ಷಕರು, ಸೇನಾ ಅಧಿಕಾರಿಗಳು ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ.

**ಆ.5ರಂದು ಸ್ಥಾಪನಾ ದಿನಾಚರಣೆ**

ನವೋದಯ ವಿದ್ಯಾಲಯ ಸಮಿತಿಯ 40ನೇ ವಾರ್ಷಿಕೋತ್ಸವದ ಅಂಗವಾಗಿ ಆಗಸ್ಟ್ 5ರಂದು ಗದಗದ ಪಿ.ಎಂ. ಶ್ರೀ ಜವಾಹರ ನವೋದಯ ವಿದ್ಯಾಲಯದಲ್ಲಿ ವಿದ್ಯಾರ್ಥಿಗಳು, ಹಳೆಯ ವಿದ್ಯಾರ್ಥಿಗಳು, ಪೋಷಕರು ಹಾಗೂ ಸಿಬ್ಬಂದಿಯ ಸಮ್ಮುಖದಲ್ಲಿ ಶೈಕ್ಷಣಿಕ, ಸಾಂಸ್ಕೃತಿಕ ಹಾಗೂ ಸ್ಮರಣಾರ್ಥ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಈ ಕಾರ್ಯಕ್ರಮವು ನವೋದಯದ ನಾಲ್ಕು ದಶಕಗಳ ಸಾಧನೆಯನ್ನು ಸ್ಮರಿಸುವುದರೊಂದಿಗೆ, ಗ್ರಾಮೀಣ ಪ್ರತಿಭೆಗಳನ್ನು ರಾಷ್ಟ್ರ ನಿರ್ಮಾಣದ ಮುಖ್ಯವಾಹಿನಿಗೆ ತರಬೇಕೆಂಬ ಸಂಕಲ್ಪವನ್ನು ಮತ್ತಷ್ಟು ಬಲಪಡಿಸಲಿದೆ ಎಂದು ವಿದ್ಯಾಲಯದ ಪ್ರಾಚಾರ್ಯರು ತಿಳಿಸಿದ್ದಾರೆ.




### ಅಮೃತಪ್ಪ ಮೊರಬದ ಏಕವ್ಯಕ್ತಿ ಕಲಾ ಪ್ರದರ್ಶನ ಉದ್ಘಾಟನೆ

# ಎಐಗೆ ಹೆದರಬೇಡಿ, ಸೃಜನಶೀಲತೆಯೇ ಕಲಾವಿದರ ನಿಜವಾದ ಶಕ್ತಿ

**ವಿಜಯಸಾಕ್ಷಿ ಸುದ್ದಿ, ಗದಗ**

ಕೃತಕ ಬುದ್ಧಿಮತ್ತೆ (ಎಐ) ಕಲಾವಿದರಿಗೆ ಸವಾಲಾಗಿದ್ದರೂ ಅದಕ್ಕೆ ಹೆದರದೇ ಸೃಜನಶೀಲತೆ, ಸಕಾರಾತ್ಮಕ ಚಿಂತನೆ ಮತ್ತು ಹೊಸತನದ ಮೂಲಕ ಮುನ್ನಡೆಯಬೇಕು. ಕಲಾವಿದರ ಕಲ್ಪನಾ ಶಕ್ತಿಯನ್ನು ಯಾವುದೇ ತಂತ್ರಜ್ಞಾನ ಮೀರಿಸಲು ಸಾಧ್ಯವಿಲ್ಲ ಎಂದು ಹುಬ್ಬಳ್ಳಿಯ ನ್ಯಾನೋ ಪಿಕ್ಸ್ ಐಎಸ್‌ಎಸ್ ಪ್ರೈವೇಟ್ ಲಿಮಿಟೆಡ್‌ನ ಸಿಒಒ ಹಾಗೂ ನಿರ್ದೇಶಕಿ ಸುಚಿತ್ರಾ ಬಾಲಸುಬ್ರಮಣಿಯನ್ ಹೇಳಿದರು.

ನಗರದ ವಿಜಯ ಕಲಾಮಂದಿರದ ಕಲಾ ಮಹರ್ಷಿ ಟಿ.ಪಿ. ಅಕ್ಕಿ ಆರ್ಟ್ ಗ್ಯಾಲರಿಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಧನಸಹಾಯದೊಂದಿಗೆ ಆಯೋಜಿಸಿರುವ ಕಲಾವಿದ ಅಮೃತಪ್ಪ ರಾ. ಮೊರಬದ ಅವರ ಏಕವ್ಯಕ್ತಿ ಕಲಾ ಪ್ರದರ್ಶನವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕಲಾವಿದರ ಪ್ರತಿಭೆಗೆ ಸೂಕ್ತ ಮಾರುಕಟ್ಟೆ ನಿರ್ಮಾಣವಾಗಬೇಕಿದ್ದು, ಕಲೆ ಮತ್ತು ಕಲಾವಿದರನ್ನು ಪ್ರೋತ್ಸಾಹಿಸುವುದು ಸಮಾಜದ ಜವಾಬ್ದಾರಿಯಾಗಿದೆ. ಅಮೃತಪ್ಪ ಮೊರಬದ ಅವರ ಕಲಾಕೃತಿಗಳಲ್ಲಿ ಮನುಷ್ಯನ ಅಂತರಂಗದ ಭಾವನೆಗಳನ್ನು ವೈವಿಧ್ಯಮಯ ಬಣ್ಣಗಳ ಮೂಲಕ ಪರಿಣಾಮಕಾರಿಯಾಗಿ ಅಭಿವ್ಯಕ್ತಿಸಿರುವುದು ವಿಶೇಷವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಮುಖ್ಯ ಅತಿಥಿಯಾಗಿ ಮಾತನಾಡಿದ ಹಿರಿಯ ಕಲಾವಿದ ಹಾಗೂ ವಿಜಯ ಲಲಿತಕಲಾ ಸಂಸ್ಥೆಯ ಅಧ್ಯಕ್ಷ ಪ್ರೊ. ಅಶೋಕ ಅಕ್ಕಿ, ಎಐ ಬಗ್ಗೆ ಆತಂಕಪಡುವ ಅಗತ್ಯವಿಲ್ಲ. ಅದರ ತಂತ್ರಜ್ಞಾನವನ್ನು ಅರ್ಥಮಾಡಿಕೊಂಡು ಕಲೆಯೊಂದಿಗೆ ಸಂಯೋಜಿಸಿಕೊಂಡಾಗ ಕಲಾವಿದರಿಗೆ ಹೊಸ ಅವಕಾಶಗಳು ಸೃಷ್ಟಿಯಾಗುತ್ತವೆ. ನಿರಂತರ ಅಧ್ಯಯನ, ಪರಿಶ್ರಮ ಮತ್ತು ಸೃಜನಶೀಲತೆಯೇ ಯಶಸ್ಸಿನ ಗುಟ್ಟು ಎಂದು ಹೇಳಿದರು.

ಸರ್ಕಾರ ಕಲಾ ಪ್ರದರ್ಶನಗಳಿಗೆ ನೀಡುತ್ತಿದ್ದ ಅನುದಾನ ಕಡಿತಗೊಳಿಸಿರುವುದು ವಿಷಾದನೀಯ. ಇದರಿಂದ ಯುವ ಕಲಾವಿದರಿಗೆ ತಮ್ಮ ಪ್ರತಿಭೆ ಪ್ರದರ್ಶಿಸಲು ತೊಂದರೆಯಾಗುತ್ತಿದೆ. ಈ ಕುರಿತು ಸಂಬಂಧಪಟ್ಟವರ ಗಮನ ಸೆಳೆಯಬೇಕಿದೆ ಎಂದು ತಿಳಿಸಿದರು.

'ಮಾಸ್ಕ್ ಆಂಡ್ ಫೀಲಿಂಗ್ಸ್' ಶೀರ್ಷಿಕೆಯಡಿ ಅಮೃತಪ್ಪ ಮೊರಬದ ಪ್ರದರ್ಶಿಸಿರುವ ನವ್ಯ ಕಲಾಕೃತಿಗಳು ಮನುಷ್ಯನ ವಿವಿಧ ಭಾವನೆಗಳನ್ನು ಬಣ್ಣಗಳ ಮೂಲಕ ಅನಾವರಣಗೊಳಿಸಿದ್ದು, ಕಲಾಭಿಮಾನಿಗಳ ಗಮನ ಸೆಳೆದವು.

ಕಾರ್ಯಕ್ರಮದಲ್ಲಿ ಡಾ. ಪ್ರದೀಪ ಉಗಲಾಟ, ಬಿ.ಸಿ. ಕುತ್ನಿ, ಗಣೇಶ ಬಡಿಗೇರ, ಪ್ರವೀಣ ಗಾಯ್ಕರ ಉಪಸ್ಥಿತರಿದ್ದರು. ವಿಜಯ ಕಲಾಮಂದಿರದ ಕಾರ್ಯದರ್ಶಿ ಪ್ರಕಾಶ ಅಕ್ಕಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಪ್ರಾಚಾರ್ಯ ಕೃಷ್ಣ ಕೆ.ಎಂ. ಸ್ವಾಗತಿಸಿದರು. ಉಪನ್ಯಾಸಕ ಶರಣಪ್ಪ ಬಿ.ಎಚ್. ವಂದಿಸಿದರು. ಕಲಾವಿದ ಬಸವರಾಜ ನೆಲಜೇರಿ ಕಾರ್ಯಕ್ರಮ ನಿರೂಪಿಸಿದರು.



# ಶಿಕ್ಷಣ ಕ್ರಾಂತಿಯ ರೂವಾರಿ ಡಾ. ಡಿ.ಸಿ. ಪಾವಟೆ



**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಸಮಾಜದ ಒಳಿತಿಗಾಗಿ ಬದುಕಿದ ಮಹನೀಯರು ಎಂದಿಗೂ ಜನಮಾನಸದಲ್ಲಿ ಚಿರಸ್ಥಾಯಿಯಾಗಿ ಉಳಿಯುತ್ತಾರೆ. ಕರ್ನಾಟಕ ವಿಶ್ವವಿದ್ಯಾಲಯದ ಮೂರನೇ ಕುಲಪತಿಗಳಾಗಿದ್ದ ಡಾ. ಡಿ.ಸಿ. ಪಾವಟೆ ಅವರು ಶಿಕ್ಷಣ ಕ್ರಾಂತಿಯ ರೂವಾರಿಯಾಗಿದ್ದು, ಉತ್ತರ ಕರ್ನಾಟಕದ ಲಕ್ಷಾಂತರ ವಿದ್ಯಾರ್ಥಿಗಳ ಬದುಕಿಗೆ ದಾರಿದೀಪವಾಗಿದ್ದಾರೆ ಎಂದು ಡಾ. ಆರ್.ಎಂ. ಕಲ್ಲನಗೌಡ್ರ ಹೇಳಿದರು.

ಪಟ್ಟಣದ ಬಾಲಲೀಲಾ ಮಹಾಂತ ಶಿವಯೋಗಿಗಳ ಗವಿಮಠದಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ಮುಳಗುಂದ ಹೋಬಳಿ ಘಟಕ ಹಾಗೂ ಲಿಂ. ಗಂಗಮ್ಮ ಮತ್ತು ಲಿಂ. ಚನ್ನಬಸಪ್ಪ ವಿ. ಚವಡಿ ಅವರ ಸ್ಮರಣಾರ್ಥ ಆಯೋಜಿಸಿದ್ದ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು ಸಾನ್ನಿಧ್ಯ ವಹಿಸಿ ಮಾತನಾಡಿ, ಡಾ. ಡಿ.ಸಿ. ಪಾವಟೆ ಅವರು ಶಿಕ್ಷಣದ ಮೂಲಕ ಬಡ ವಿದ್ಯಾರ್ಥಿಗಳ ಭವಿಷ್ಯ ರೂಪಿಸಿದ ಮಹನೀಯರು. ಅವರ ಆದರ್ಶ ಗಳನ್ನು ಮುಂದಿನ ಪೀಳಿಗೆಗೆ ಪರಿಚಯಿ ಸುವ ದತ್ತಿ ಉಪನ್ಯಾಸಗಳು ಸಮಾಜಕ್ಕೆ ಮಾರ್ಗದರ್ಶಿಯಾಗಿವೆ ಎಂದು ಹೇಳಿದರು.

ಡಾ. ಎಸ್.ಸಿ. ಚವಡಿ ಮಾತನಾಡಿ, ಡಾ. ಪಾವಟೆ ಅವರ ಶಿಕ್ಷಣ ಕ್ಷೇತ್ರದ ಸೇವೆ ಹಾಗೂ ಕಾಯಕನಿಷ್ಠೆ ಎಲ್ಲರಿಗೂ ಮಾದರಿಯಾಗಿದ್ದು, ಅವರ ಬದುಕಿನ ಆದರ್ಶಗಳನ್ನು ಸಮಾಜಕ್ಕೆ ತಲುಪಿಸುವ ಉದ್ದೇಶದಿಂದ ಈ ದತ್ತಿ ಉಪನ್ಯಾಸವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಂ.ಡಿ. ಬಟ್ಟೂರ ವಹಿಸಿದ್ದರು. ಎಸ್.ಎಂ. ನೀಲಗುಂದ, ವರ್ಷಾ ಬಾರಕೇರ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಎಸ್.ಎಂ. ಉಜ್ಜಣ್ಣವರ ಕಾರ್ಯಕ್ರಮ ನಿರೂಪಿಸಿದರು.

# ಸಚಿವ ಸ್ಥಾನ ತಪ್ಪಿದ್ದೇ ಗದಗದ ಅದೃಷ್ಟ!

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಗೆ ಸಚಿವ ಸ್ಥಾನ ದೊರೆಯದಿರುವ ವಿಚಾರಕ್ಕೆ ಸಂಬಂಧಿಸಿದಂತೆ ಗದಗ ಜಿಲ್ಲಾ ಬಿಜೆಪಿ ಯುವ ಮೋರ್ಚಾ ಜಿಲ್ಲಾಧ್ಯಕ್ಷ ಸಂತೋಷ ಅಕ್ಕಿ ಕಾಂಗ್ರೆಸ್ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದು, ಮುಖ್ಯಮಂತ್ರಿಗಳ ನಿರ್ಧಾರವನ್ನು ಸ್ವಾಗತಿಸಿರುವುದಾಗಿ ತಿಳಿಸಿದ್ದಾರೆ. ಪತ್ರಿಕಾ ಪ್ರಕಟಣೆ ಮೂಲಕ ಪ್ರತಿಕ್ರಿಯಿಸಿರುವ ಅವರು, ಕಳೆದ ಮೂರು ದಶಕಗಳಿಂದ ಗದಗ ಜಿಲ್ಲೆಯನ್ನು ಕಾಂಗ್ರೆಸ್ ನಾಯಕರು ಕೇವಲ ಮತಬ್ಯಾಂಕ್ ಆಗಿ ಬಳಸಿಕೊಂಡಿದ್ದು, ಜಿಲ್ಲೆಯ ಆರ್ಥಿಕ, ಕೈಗಾರಿಕಾ ಹಾಗೂ ಕೃಷಿ ಕ್ಷೇತ್ರಗಳ ಅಭಿವೃದ್ಧಿಯನ್ನು ಕಡೆಗಣಿಸಿದ್ದಾರೆ ಎಂದು ಆರೋಪಿಸಿದರು. ಗದಗ ಜಿಲ್ಲೆಗೆ ಸಚಿವ ಸ್ಥಾನ ನೀಡದಿರುವುದು ಜಿಲ್ಲೆಯ ಹಿತದೃಷ್ಟಿಯಿಂದಲೇ ಒಳ್ಳೆಯದಾಗಿದೆ ಎಂದು ವ್ಯಂಗ್ಯವಾಡಿರುವ ಅವರು, ಹಿರಿಯ ಶಾಸಕರಿಗೆ ಸಚಿವ ಸ್ಥಾನ ನೀಡದೆ ಸಭಾಧ್ಯಕ್ಷರ ಹುದ್ದೆ ನೀಡಿ ಕಾಂಗ್ರೆಸ್ ಕೈತೊಳೆದುಕೊಂಡಿದೆ. ಇದರಿಂದ ಕಾಂಗ್ರೆಸ್‌ನ ಆಂತರಿಕ ಗೊಂದಲವೂ ಬಹಿರಂಗವಾಗಿದೆ ಎಂದು ಟೀಕಿಸಿದರು. ಜಿಲ್ಲೆಯಲ್ಲಿ ಕೈಗಾರಿಕಾ ಅಭಿವೃದ್ಧಿ, ಉದ್ಯೋಗ ಸೃಷ್ಟಿ, ಜಿಮ್ಸ್ ಆಸ್ಪತ್ರೆಯ ಸೌಲಭ್ಯ ವಿಸ್ತರಣೆ, ರೈತರ ಸಮಸ್ಯೆಗಳ ಪರಿಹಾರ, ಕುಡಿಯುವ ನೀರು ಹಾಗೂ ಮೂಲಸೌಕರ್ಯ ಅಭಿವೃದ್ಧಿಯಲ್ಲಿ ಕಾಂಗ್ರೆಸ್ ಸರ್ಕಾರ ವಿಫಲವಾಗಿದೆ ಎಂದು ಆರೋಪಿಸಿದರು. ಬಿಜೆಪಿ ಸರ್ಕಾರದ ಅವಧಿಯಲ್ಲಿ ರೈಲ್ವೆ, ಹೆದ್ದಾರಿ ಸೇರಿದಂತೆ ಹಲವು ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ದೊರೆತಿದ್ದರೆ, ಈಗಿನ ಸರ್ಕಾರ ಜಿಲ್ಲೆಯನ್ನು ಮತ್ತಷ್ಟು ಹಿಂದುಳಿದ ಸ್ಥಿತಿಗೆ ತಳ್ಳಿದೆ ಎಂದು ದೂರಿದರು. ಜಿಲ್ಲೆಯ ಹಿತಾಸಕ್ತಿಯನ್ನು ನಿರ್ಲಕ್ಷಿಸುವ ಹಾಗೂ ಹುದ್ದೆಗಳ ರಾಜಕಾರಣ ಮಾಡುವವರ ವಿರುದ್ಧ ಬಿಜೆಪಿ ಯುವ ಮೋರ್ಚಾದ ಹೋರಾಟ ಮುಂದೆಯೂ ನಿರಂತರವಾಗಿ ಮುಂದುವರಿಯಲಿದೆ ಎಂದು ಸಂತೋಷ ಅಕ್ಕಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ತಾಲೂಕು ಮಟ್ಟದ ಪ್ರಗತಿ ಪರಿಶೀಲನಾ ಸಭೆ; ನಾಗರಾಜ ಮಡಿವಾಳರ

# ಅರ್ಹರಿಗೆ ಗ್ಯಾರಂಟಿ ಯೋಜನೆ ತಲುಪಿಸಿ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ಯಾವುದೇ ಲೋಪವಿಲ್ಲದೆ ತಲುಪುವಂತೆ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಲಕ್ಷ್ಮೇಶ್ವರ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ನಾಗರಾಜ ಮಡಿವಾಳ ಹೇಳಿದರು.

ಪಟ್ಟಣದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಸೋಮವಾರ ನಡೆದ ಗ್ಯಾರಂಟಿ ಯೋಜನೆಗಳ ತಾಲೂಕು ಮಟ್ಟದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು.

ಗೃಹಜ್ಯೋತಿ, ಗೃಹಲಕ್ಷ್ಮಿ, ಅನ್ನಭಾಗ್ಯ, ಶಕ್ತಿ ಹಾಗೂ ಯುವನಿಧಿ ಯೋಜನೆಗಳ ಪ್ರಗತಿಯನ್ನು ಪರಿಶೀಲಿಸಿದ ಅವರು, ಸಾರ್ವಜನಿಕರಿಂದ ಬರುವ ದೂರುಗಳಿಗೆ ತ್ವರಿತವಾಗಿ ಸ್ಪಂದಿಸಿ ಬಾಕಿ ಅರ್ಜಿಗಳ ವಿಲೇವಾರಿ ಹಾಗೂ ತಾಂತ್ರಿಕ ಸಮಸ್ಯೆಗಳನ್ನು ಶೀಘ್ರ ಬಗೆಹರಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯ ವೇಳೆ ಲಕ್ಷ್ಮವ್ವ ಬಾಲೇಹೊಸೂರ ಎಂಬ ಮಹಿಳೆ ತನ್ನ ಮಕ್ಕಳೊಂದಿಗೆ ಆಗಮಿಸಿ, ಕಳೆದ ಮೂರು ವರ್ಷಗಳಿಂದ ಪಡಿತರ ಚೀಟಿಗಾಗಿ ಅಲೆದಾಡುತ್ತಿದ್ದರೂ ಇನ್ನೂ ಸೌಲಭ್ಯ ದೊರೆತಿಲ್ಲ ಎಂದು ಅಳಲು ತೋಡಿಕೊಂಡರು. ಈ ಕುರಿತು ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಲಾಯಿತು.

ಸಭೆಯಲ್ಲಿ ಹೆಸ್ಕಾಂ ಎಇಇ ಆಂಜನಪ್ಪ ಬಿ., ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಮೃತ್ಯುಂಜಯ ಗುಡ್ಡದನ್ವೇರಿ, ಕೆಎಸ್‌ಆರ್‌ಟಿಸಿ ಅಧಿಕಾರಿ ಪವಿತ್ರಾ ಪಿ., ವಿವಿಧ ಇಲಾಖೆಗಳ ಅಧಿಕಾರಿಗಳು, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸದಸ್ಯರು ಹಾಗೂ ತಾಪಂ ಇಒ ಮಂಜುಳಾ ಹಕಾರಿ ಉಪಸ್ಥಿತರಿದ್ದರು.

# ಜಾನುವಾರುಗಳ ಆರೋಗ್ಯದ ಬಗ್ಗೆ ರೈತರು ಜಾಗೃತರಾಗಲಿ: ಹಿರೇಗೌಡ್ರ



**ವಿಜಯಸಾಕ್ಷಿ ಸುದ್ದಿ, ಗದಗ**

ಜಾನುವಾರುಗಳ ಆರೋಗ್ಯ ಕಾಪಾಡಿದರೆ ಮಾತ್ರ ಹಾಲು ಉತ್ಪಾದನೆ ಹೆಚ್ಚಾಗಿ ರೈತರ ಆದಾಯವೂ ವೃದ್ಧಿಯಾಗುತ್ತದೆ ಎಂದು ಕರ್ನಾಟಕ ರಾಜ್ಯ ಸಹಕಾರ ಹಾಲು ಉತ್ಪಾದಕರ ಮಹಾಮಂಡಳದ ನಿರ್ದೇಶಕ ಎಚ್.ಜಿ. ಹಿರೇಗೌಡ್ರ ಹೇಳಿದರು.

ನರಗುಂದ ತಾಲೂಕು ಪಂಚಾಯಿತಿ ಸಭಾಭವನದಲ್ಲಿ ಸಹಕಾರ ಇಲಾಖೆ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಗದಗ ಜಿಲ್ಲಾ ಸಹಕಾರ ಯೂನಿಯನ್ ಹಾಗೂ ಧಾರವಾಡ ಹಾಲು ಒಕ್ಕೂಟದ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ವಿಶೇಷ ತರಬೇತಿ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು.

ಕಾಲು-ಬಾಯಿ ರೋಗ, ಕಪ್ಪು ಕಾಲು, ಗಂಟಲುಬಾಚೆ, ಬ್ರೂಸೆಲ್ಲೋಸಿಸ್ ಸೇರಿದಂತೆ ವಿವಿಧ ರೋಗಗಳಿಂದ ಜಾನುವಾರುಗಳನ್ನು ರಕ್ಷಿಸಲು ನಿಯಮಿತ ಲಸಿಕೆ, ಪಶುವೈದ್ಯರ ಸಲಹೆ, ಸ್ವಚ್ಛ ಗೋಶಾಲೆ ಹಾಗೂ ಸಮತೋಲನ ಆಹಾರ ಅತ್ಯಗತ್ಯ ಎಂದು ತಿಳಿಸಿದರು.

ಧಾರವಾಡ ಹಾಲು ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕ ಡಿ.ಟಿ. ಕಳಸದ ಮಾತನಾಡಿ, ಹಾಲು ಉತ್ಪಾದಕರ ಸಹಕಾರ ಸಂಘಗಳು ರೈತರಿಗೆ ನ್ಯಾಯಯುತ ಬೆಲೆ, ಪಶುವೈದ್ಯಕೀಯ ಸೇವೆ, ಕೃತಕ ಗರ್ಭಧಾರಣೆ, ಮೇವು ಅಭಿವೃದ್ಧಿ, ಪಶು ಆಹಾರ ಹಾಗೂ ತರಬೇತಿ ಸೇರಿದಂತೆ ಹಲವು ಸೌಲಭ್ಯಗಳನ್ನು ಒದಗಿಸುತ್ತಿವೆ ಎಂದರು.

ಕಾರ್ಯಕ್ರಮದಲ್ಲಿ ನರಗುಂದ ತಾಲೂಕಿನ ಹಾಲು ಉತ್ಪಾದಕರ ಸಹಕಾರ ಸಂಘಗಳ ಅಧ್ಯಕ್ಷರು, ಉಪಾಧ್ಯಕ್ಷರು, ಮುಖ್ಯ ಕಾರ್ಯನಿರ್ವಾಹಕರು ಹಾಗೂ ಹಾಲು ಪರೀಕ್ಷಕರಿಗೆ ಜಾನುವಾರುಗಳ ಆರೋಗ್ಯ, ಹಸಿರು ಮೇವು, ಶುದ್ಧ ಹಾಲು ಉತ್ಪಾದನೆ ಹಾಗೂ ಹೈನುಗಾರಿಕೆ ಕುರಿತು ತಜ್ಞರಿಂದ ತರಬೇತಿ ನೀಡಲಾಯಿತು.

ಕಾರ್ಯಕ್ರಮದಲ್ಲಿ ಗದಗ ಜಿಲ್ಲಾ ಸಹಕಾರ ಯೂನಿಯನ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಚಂದ್ರಶೇಖರ ಎಸ್. ಕರಿಯಪ್ಪನವರ, ಧಾರವಾಡ ಹಾಲು ಒಕ್ಕೂಟದ ಅಧಿಕಾರಿಗಳು, ಸಹಕಾರ ಇಲಾಖೆ ಅಧಿಕಾರಿಗಳು ಹಾಗೂ ವಿವಿಧ ಹಾಲು ಉತ್ಪಾದಕರ ಸಹಕಾರ ಸಂಘಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

### ಸಮುದಾಯದ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿ ಉನ್ನತ ಹುದ್ದೆಗೇರಿಸಿ: ನೇಮಿರಾಜ್ ನಾಯ್ಕ್

# ಶಿಕ್ಷಣದಿಂದಲೇ ಸಮಾಜದ ಭವಿಷ್ಯ ಬದಲಿಸಿ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಸಮುದಾಯದ ಅಭಿವೃದ್ಧಿಗೆ ಶಿಕ್ಷಣವೇ ಮೂಲಮಂತ್ರವಾಗಿದ್ದು, ಹಡಪದ ಸಮಾಜದ ಪೋಷಕರು ತಮ್ಮ ಮಕ್ಕಳ ವಿದ್ಯಾಭ್ಯಾಸಕ್ಕೆ ಹೆಚ್ಚಿನ ಆದ್ಯತೆ ನೀಡಿ ಅವರನ್ನು ಉನ್ನತ ಶಿಕ್ಷಣದೊಂದಿಗೆ ಉತ್ತಮ ಉದ್ಯೋಗಸ್ಥರನ್ನಾಗಿ ರೂಪಿಸಬೇಕು ಎಂದು ಶಾಸಕ ಕೆ. ನೇಮಿರಾಜ ನಾಯ್ಕ್ ಕರೆ ನೀಡಿದರು.

ಪಟ್ಟಣದ ಹರ ಕಲ್ಯಾಣ ಮಂಟಪದಲ್ಲಿ ಆಯೋಜಿಸಿದ್ದ ಶ್ರೀ ಹಡಪದ ಅಪ್ಪಣ್ಣ ಅವರ 892ನೇ ಜಯಂತ್ಯುತ್ಸವ ಉದ್ಘಾಟಿಸಿ ಮಾತನಾಡಿದ ಅವರು, ಹಡಪದ ಅಪ್ಪಣ್ಣ ಅವರು 12ನೇ ಶತಮಾನದ ವಚನ ಚಳುವಳಿ ಹಾಗೂ ಸಾಮಾಜಿಕ ಕ್ರಾಂತಿಯ ಪ್ರಮುಖ ಹರಿಕಾರರಲ್ಲಿ ಒಬ್ಬರಾಗಿದ್ದು, ಬಸವಣ್ಣನವರ ಆಪ್ತ ಸಹಚರ ಹಾಗೂ ಅನುಭವ ಮಂಟಪದ ಪ್ರಮುಖ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸಿದ್ದರು. ಅವರ ಜೀವನ ಮತ್ತು ಆದರ್ಶಗಳು ಇಂದಿನ ಸಮಾಜಕ್ಕೂ ಮಾರ್ಗದರ್ಶಿಯಾಗಿವೆ ಎಂದು ಹೇಳಿದರು.

ಹಡಪದ ಸಮಾಜವು ಇನ್ನೂ ಸಾಮಾಜಿಕ ಹಾಗೂ ಆರ್ಥಿಕವಾಗಿ ಹಿಂದುಳಿದಿದ್ದು, ಸರ್ಕಾರ ಇಂತಹ ಸಮುದಾಯಗಳಿಗೆ ಹೆಚ್ಚಿನ ಅನುದಾನ ಹಾಗೂ ಸೌಲಭ್ಯ ಕಲ್ಪಿಸಬೇಕಿದೆ. ಸಮಾಜದ ಮನವಿಗೆ ಸ್ಪಂದಿಸಿ ಸಮುದಾಯ ಭವನ ನಿರ್ಮಾಣಕ್ಕೆ ಈ ವರ್ಷ ₹25 ಲಕ್ಷ ಹಾಗೂ ಮುಂದಿನ ವರ್ಷ ಮತ್ತೊಂದು ₹25 ಲಕ್ಷ ಅನುದಾನ ನೀಡುವುದಾಗಿ ಘೋಷಿಸಿದ ಅವರು, ಸರ್ಕಾರದಿಂದ ಇನ್ನಷ್ಟು ನೆರವು ದೊರಕಿಸಲು ಪ್ರಯತ್ನಿಸುವುದಾಗಿ ಭರವಸೆ ನೀಡಿದರು.

ಆಶೀರ್ವಚನ ನೀಡಿದ ಅನ್ನದಾನಿ ಭಾರತಿ ಹಡಪದ ಅಪ್ಪಣ್ಣ ಮಹಾಸ್ವಾಮಿಗಳು, ಮುಂಡ್ರಿಗಿ, ಹಡಪದ ಅಪ್ಪಣ್ಣ ಅವರು ಬಸವಣ್ಣನವರ ಆಪ್ತ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸಿ ಸುಮಾರು 240ಕ್ಕೂ ಹೆಚ್ಚು ವಚನಗಳನ್ನು ರಚಿಸಿರುವ ಮಹಾನ್ ಶಿವಶರಣರು ಎಂದು ಸ್ಮರಿಸಿದರು. ಸಮಾಜದ ಮಕ್ಕಳು ಯಾವುದೇ ಕಾರಣಕ್ಕೂ ವಿದ್ಯಾಭ್ಯಾಸವನ್ನು ಅರ್ಧಕ್ಕೆ ನಿಲ್ಲಿಸಬಾರದು. ಪೋಷಕರು ಎಷ್ಟೇ ಕಷ್ಟ ಬಂದರೂ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಬೇಕು. ಸರ್ಕಾರವೂ ಹಡಪದ ಸಮಾಜವನ್ನು ಗುರುತಿಸಿ ಮೀಸಲಾತಿ ಹಾಗೂ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಬೇಕು ಎಂದು ಒತ್ತಾಯಿಸಿದರು.

> **ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿದಾಗ ಮಾತ್ರ ಸಮುದಾಯದ ಭವಿಷ್ಯ ಉಜ್ವಲವಾಗುತ್ತದೆ, ಪ್ರತಿಯೊಬ್ಬ ಪೋಷಕರು ಶಿಕ್ಷಣಕ್ಕೆ ಮೊದಲ ಆದ್ಯತೆ ನೀಡಬೇಕು.**
>
> **- ಕೆ. ನೇಮಿರಾಜ ನಾಯ್ಕ್**, ಶಾಸಕ

ಬಳಿಕ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಮಾಜದ ಗಣ್ಯರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಸಮಾಜದ ಅಧ್ಯಕ್ಷ ಹೆಚ್. ಮಂಜುನಾಥ, ಜಿಲ್ಲಾಧ್ಯಕ್ಷ ಡಾ. ಮಲ್ಲಪ್ಪ ಬ್ಯಾಲಾಳು, ಪಂಚಮಸಾಲಿ ಸಮಾಜದ ಅಧ್ಯಕ್ಷ ಮಂಜುನಾಥ ಗೌಡ್ರು, ರೆಡ್ಡಿ ಸಮಾಜದ ಅಧ್ಯಕ್ಷ ಬಸವರಾಜ ರೆಡ್ಡಿ, ಕುಮಾರಿ ಕಾವೇರಿ, ಶಿವ ಸಿಂಪಿಗರ ಸಮಾಜದ ಅಧ್ಯಕ್ಷ ಉಮಾಪತಿ ಹನಸಿ, ನರೇಗಲ್ಲು ಬಸವರಾಜ ಸೇರಿದಂತೆ ಸಮಾಜದ ಮುಖಂಡರು, ಯುವಕರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು. ಬಸವಲೋಕ ತಂಡ ಪ್ರಾರ್ಥನೆ ಸಲ್ಲಿಸಿತು. ಹಾಲೇಶ್ ಹುಚ್ಚನಗೌಡ ಸ್ವಾಗತಿಸಿ ನಿರೂಪಿಸಿದರು.

# ದುಶ್ಚಟಗಳಿಂದ ದೂರವಿದ್ದರೆ ಆರೋಗ್ಯವಂತ ಸಮಾಜ ನಿರ್ಮಾಣ ಸಾಧ್ಯ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ದುಶ್ಚಟಗಳು ವ್ಯಕ್ತಿಯ ವ್ಯಕ್ತಿತ್ವವನ್ನು ಕುಗ್ಗಿಸುವುದರ ಜೊತೆಗೆ ಕುಟುಂಬ, ಸಮಾಜ ಹಾಗೂ ಆರೋಗ್ಯದ ಮೇಲೂ ಗಂಭೀರ ದುಷ್ಪರಿಣಾಮ ಬೀರುತ್ತವೆ ಎಂದು ಸಂಕೇತ ದಂಡಿನ ಹೇಳಿದರು.

ಸ್ಥಳೀಯ ಕನಕದಾಸ ಪದವಿಪೂರ್ವ ಕಾಲೇಜು ಹಾಗೂ ಪ್ರೌಢಶಾಲೆಯಲ್ಲಿ ಆಯೋಜಿಸಿದ್ದ ವ್ಯಸನ ಮುಕ್ತ ಸಮಾಜ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ವ್ಯಸನಗಳು ಮೆದುಳು, ನರಮಂಡಲ ಸೇರಿದಂತೆ ದೇಹದ ವಿವಿಧ ಅಂಗಗಳ ಮೇಲೆ ದುಷ್ಪರಿಣಾಮ ಬೀರುತ್ತವೆ. ವ್ಯಕ್ತಿ ದುಶ್ಚಟಗಳಿಗೆ ಬಲಿಯಾದರೆ ಸಮಾಜದಲ್ಲಿ ಗೌರವ ಕಳೆದುಕೊಳ್ಳುವುದರೊಂದಿಗೆ ಕುಟುಂಬ ಹಾಗೂ ಸ್ನೇಹ ಸಂಬಂಧಗಳೂ ಹದಗೆಡುತ್ತವೆ. ಆದ್ದರಿಂದ ಯುವಜನತೆ ಯಾವುದೇ ರೀತಿಯ ವ್ಯಸನಗಳಿಗೆ ಬಲಿಯಾಗಬಾರದು ಎಂದು ಸಲಹೆ ನೀಡಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಶಿವಾನಂದ ಗೋಗೇರಿ ಮಾತನಾಡಿ, ಇಂದಿನ ಯುವಕರೇ ದೇಶದ ಭವಿಷ್ಯವಾಗಿದ್ದು, ಉತ್ತಮ ಮೌಲ್ಯಗಳನ್ನು ಅಳವಡಿಸಿಕೊಂಡು ವ್ಯಸನಗಳಿಂದ ದೂರವಿದ್ದಾಗ ಮಾತ್ರ ಸದೃಢ ಸಮಾಜ ನಿರ್ಮಾಣ ಸಾಧ್ಯ ಎಂದು ಹೇಳಿದರು. ದೈಹಿಕ ಶಿಕ್ಷಣ ಶಿಕ್ಷಕ ಎಸ್.ಎಂ. ಉಣಕಲ್ ವಿದ್ಯಾರ್ಥಿಗಳಿಗೆ ವ್ಯಸನಮುಕ್ತ ಜೀವನ ನಡೆಸುವ ಕುರಿತು ಪ್ರತಿಜ್ಞಾವಿಧಿ ಬೋಧಿಸಿದರು. ಈ ಸಂದರ್ಭದಲ್ಲಿ ಪ್ರವೀಣ ಕಿನ್ನಾಳ, ಪಿ.ಎನ್. ಹಿರೇಮಠ, ಆರ್.ಟಿ. ಅರಕಸಾಲಿ, ಪಿ.ಎಂ. ಉಪ್ಪಿನ, ಎಸ್.ಎಂ. ಉಣಕಲ್, ಬಸವಂತಪ್ಪ ವೀರಣ್ಣನವರ, ವೆಂಕಟಾಪುರ ಸೇರಿದಂತೆ ಶಿಕ್ಷಕರು ಹಾಗೂ ವಿದ್ಯಾರ್ಥಿ-ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು. ಬಸವರಾಜ ದೇಸಾಯಿಪಟ್ಟಿ ನಿರೂಪಿಸಿ ವಂದಿಸಿದರು.

## ಸಂಕ್ಷಿಪ್ತ ಸುದ್ದಿಗಳು

### ಕೈಗಾರಿಕಾ ನಿವೇಶನಕ್ಕೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಉದ್ಯಮ ಆರಂಭಿಸಲು ಆಸಕ್ತಿ ಹೊಂದಿರುವ ಉದ್ಯಮಿಗಳಿಗೆ ಕೈಗಾರಿಕಾ ನಿವೇಶನಗಳನ್ನು ಅಭಿವೃದ್ಧಿಪಡಿಸಿ ಹಂಚಿಕೆ ಹಾಗೂ ಮಾರಾಟ ಮಾಡಲು ಗದಗ ಜಿಲ್ಲಾ ಕೈಗಾರಿಕಾ ಕೇಂದ್ರ ಮುಂದಾಗಿದೆ.

ಈ ಕುರಿತು ಪ್ರಕಟಣೆ ನೀಡಿರುವ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು, ಖಾಸಗಿ ವಲಯದಲ್ಲಿ ಎಲ್ಲಾ ಮೂಲಸೌಕರ್ಯ ಹಾಗೂ ಅಗತ್ಯ ಸೌಲಭ್ಯಗಳನ್ನು ಹೊಂದಿರುವ ಕೈಗಾರಿಕಾ ನಿವೇಶನಗಳನ್ನು ಇಲಾಖೆಯ ಮೇಲ್ವಿಚಾರಣೆಯಲ್ಲಿ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟು ಖಾಸಗಿಯವರಿಂದ ಅಭಿವೃದ್ಧಿಪಡಿಸಿ, ಪ್ರತಿ ಚದರ ಅಡಿಗೆ ₹275 ದರದಲ್ಲಿ ಹಂಚಿಕೆ ಸಹಿತ ಮಾರಾಟ ಮಾಡಲು ಉದ್ದೇಶಿಸಲಾಗಿದೆ ಎಂದು ತಿಳಿಸಿದ್ದಾರೆ.

ಆಸಕ್ತರು ನಿಗದಿತ ನಮೂನೆಯಲ್ಲಿ ಅರ್ಜಿಯನ್ನು ಭರ್ತಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ಇ-ಮೇಲ್, ಅಂಚೆ ಅಥವಾ ಖುದ್ದಾಗಿ ಆಗಸ್ಟ್ 20ರೊಳಗೆ ಜಿಲ್ಲಾ ಕೈಗಾರಿಕಾ ಕೇಂದ್ರಕ್ಕೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಗದಗ ಜಿಲ್ಲಾ ಕೈಗಾರಿಕಾ ಕೇಂದ್ರ ಅಥವಾ ದೂರವಾಣಿ: 08372-200122 ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಡಿಸಿ ಕಚೇರಿ ಚಲೋಗೆ ತಿಮ್ಮಾಪೂರ ರೈತರ ಬೆಂಬಲ



**ವಿಜಯಸಾಕ್ಷಿ ಸುದ್ದಿ, ಗದಗ**

ರೈತರ ವಿವಿಧ ಸಮಸ್ಯೆಗಳ ಪರಿಹಾರಕ್ಕಾಗಿ ಆಗಸ್ಟ್ 5ರಂದು ಗದಗ ಜಿಲ್ಲಾಧಿಕಾರಿ ಕಚೇರಿ ಎದುರು ನಡೆಯಲಿರುವ 'ಡಿಸಿ ಕಚೇರಿ ಚಲೋ' ಬೃಹತ್ ಪ್ರತಿಭಟನೆಗೆ ತಿಮ್ಮಾಪೂರ ಗ್ರಾಮದ ರೈತರು ಸಂಪೂರ್ಣ ಬೆಂಬಲ ಸೂಚಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ತಿಮ್ಮಾಪೂರ ಗ್ರಾಮದ ಶ್ರೀ ಮಾರುತೇಶ್ವರ ದೇವಸ್ಥಾನದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ (ವಿ.ಆರ್. ನಾರಾಯಣರೆಡ್ಡಿ ಬಣ) ಗ್ರಾಮ ಘಟಕ ಕೋಟುಮಚಿಗಿ ವತಿಯಿಂದ ರೈತ ಸಭೆ ನಡೆಯಿತು.

ಸಭೆಯನ್ನುದ್ದೇಶಿಸಿ ಮಾತನಾಡಿದ ಸಂಘದ ಗದಗ ಜಿಲ್ಲಾ ಅಧ್ಯಕ್ಷ ಯಲ್ಲಪ್ಪ ಎಚ್. ಬಾಬರಿ, 2025-26ನೇ ಸಾಲಿನ ಎಲ್ಲ ಬೆಳೆಗಳ ವಿಮೆಯನ್ನು ತಕ್ಷಣ ಮಂಜೂರು ಮಾಡಬೇಕು, ಗದಗ ಜಿಲ್ಲೆಯನ್ನು ಸಂಪೂರ್ಣ ಬರಪೀಡಿತ ಜಿಲ್ಲೆ ಎಂದು ಘೋಷಿಸಬೇಕು, ರಾಷ್ಟ್ರೀಕೃತ ಬ್ಯಾಂಕ್‌ಗಳ ರೈತರ ಸಾಲವನ್ನು ಸಂಪೂರ್ಣ ಮನ್ನಾ ಮಾಡಬೇಕು ಹಾಗೂ ಕಪ್ಪತ್ತಗುಡ್ಡ ಅರಣ್ಯವನ್ನು ಸಂರಕ್ಷಿಸಬೇಕು ಎಂಬುದು ರೈತರ ಪ್ರಮುಖ ಬೇಡಿಕೆಗಳಾಗಿವೆ. ಸರ್ಕಾರ ಕೂಡಲೇ ಇವುಗಳನ್ನು ಈಡೇರಿಸಬೇಕು ಎಂದು ಆಗ್ರಹಿಸಿದರು.

ಕಬ್ಬು ಬೆಳೆಗಾರರು ತಮ್ಮ ಬೇಡಿಕೆಗಳಿಗಾಗಿ ಎಂಟು ದಿನಗಳ ಕಾಲ ರಾಷ್ಟ್ರೀಯ ಹೆದ್ದಾರಿ ತಡೆ ನಡೆಸಿ ಯಶಸ್ಸು ಸಾಧಿಸಿದ್ದಾರೆ. ಅದೇ ರೀತಿಯಲ್ಲಿ ರೈತರು ಒಗ್ಗಟ್ಟಿನಿಂದ ಹೋರಾಟ ನಡೆಸಿದರೆ ನ್ಯಾಯ ದೊರೆಯಲಿದೆ. ರಾಷ್ಟ್ರೀಕೃತ ಬ್ಯಾಂಕ್ ಸಾಲ ಹಾಗೂ ಬೆಳೆ ವಿಮೆ ಕುರಿತು ಎರಡು-ಮೂರು ದಿನಗಳಲ್ಲಿ ಸರ್ಕಾರ ನಿರ್ಧಾರ ಕೈಗೊಳ್ಳದಿದ್ದರೆ ಆಗಸ್ಟ್ 5ರ ಹೋರಾಟ ಉಗ್ರ ಸ್ವರೂಪ ಪಡೆಯಲಿದೆ ಎಂದು ಎಚ್ಚರಿಸಿದರು.

ರೈತ ಮುಖಂಡ ಶರಣಪ್ಪ ಮ್ಯಾಗೇರಿ ಮಾತನಾಡಿ, ಆಗಸ್ಟ್ 5ರಂದು ನಡೆಯುವ ಪ್ರತಿಭಟನೆಗೆ ತಿಮ್ಮಾಪೂರ ಹಾಗೂ ಸುತ್ತಮುತ್ತಲಿನ ಗ್ರಾಮಗಳ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಗದಗಕ್ಕೆ ತೆರಳಿ ಭಾಗವಹಿಸುವುದಾಗಿ ಭರವಸೆ ನೀಡಿದರು.

ಸಭೆಯಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಗ್ರಾಮ ಘಟಕ ಕೋಟುಮಚಿಗಿ ಪ್ರತಿಭಟನೆಗೆ ಸಂಪೂರ್ಣ ಬೆಂಬಲ ಘೋಷಿಸಿತು. ಬಳಿಕ ರೈತರ ಶಕ್ತಿ ಬಹಳ ಇದೆ ಎಂಬ ಘೋಷಣೆಗಳೊಂದಿಗೆ ಪ್ರತಿಭಟನೆಯನ್ನು ಯಶಸ್ವಿಗೊಳಿಸುವ ಸಂಕಲ್ಪ ಕೈಗೊಳ್ಳಲಾಯಿತು.

ಸಭೆಯಲ್ಲಿ ಹುಚ್ಚೀರಪ್ಪ ಬಡೆಗೇರ, ಪಾಲಾಕ್ಷಯ್ಯ ಬಳಗೇರಮಠ, ಮಲ್ಲಪ್ಪ ರಮಾಣೆ, ಸಂತೋಷ ಮುತ್ತಾಳ, ಮುನಿಯಪ್ಪ ಶಿಂಗಟಾಲಕೇರಿ, ಮುತ್ತಪ್ಪ ಜಗ್ಗಲ, ಹುಚ್ಚೀರಪ್ಪ ಜೋಗಿನ, ಶಿವರಾಜ ಒಂಟೇಲಿ, ಮಾದೇಗೌಡ ಸಂಕನಗೌಡ್ರ, ಪರಪ್ಪ ಕಡಗದ, ಬೀರಪ್ಪ ಕಂಬಳಿ, ರೇಣಕಪ್ಪ ಕಿನ್ನಾಳ, ಬಾಬು ದಿವಟಿ, ಜಗದೀಶ್ ಮಲ್ಲನವರ ಸೇರಿದಂತೆ ನೂರಾರು ರೈತರು, ಕೂಲಿ ಕಾರ್ಮಿಕರು ಹಾಗೂ ಗ್ರಾಮದ ಹಿರಿಯರು ಉಪಸ್ಥಿತರಿದ್ದರು.

### ವೈದ್ಯರು-ಸಿಬ್ಬಂದಿಯ ನಿರ್ಲಕ್ಷ್ಯದಿಂದ ಬಡ ರೋಗಿಗಳ ಸಂಕಷ್ಟ ಆರೋಪ

# ಜಿಮ್ಸ್‌ನಲ್ಲಿ ರೋಗಿಗಳ ಪರದಾಟಕ್ಕೆ ಯಾರು ಹೊಣೆ?

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಮ್ಸ್ ಜಿಲ್ಲಾ ಆಸ್ಪತ್ರೆಯಲ್ಲಿ ವೈದ್ಯರು ಹಾಗೂ ಸಿಬ್ಬಂದಿಯ ನಿರ್ಲಕ್ಷ್ಯದಿಂದ ಬಡ ರೋಗಿಗಳಿಗೆ ಸಮರ್ಪಕ ಚಿಕಿತ್ಸೆ ಸಿಗದೆ ದಿನನಿತ್ಯ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಆರೋಪಿಸಿರುವ ಗದಗ ಜಿಲ್ಲಾ ಸ್ಲಂ ಸಮಿತಿ, ಜಿಮ್ಸ್ ನಿರ್ದೇಶಕರ ವಿರುದ್ಧ ಸೂಕ್ತ ಕ್ರಮ ಕೈಗೊಂಡು ಆಸ್ಪತ್ರೆಯಲ್ಲಿನ ಅವ್ಯವಸ್ಥೆಯನ್ನು ಸರಿಪಡಿಸುವಂತೆ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದೆ.

ಸಮಿತಿಯ ಅಧ್ಯಕ್ಷ ಇಮ್ತಿಯಾಜ್ ಆರ್. ಮಾನ್ವಿ ನೇತೃತ್ವದಲ್ಲಿ ಜಿಲ್ಲಾಧಿಕಾರಿಗಳಿಗೆ ಸಲ್ಲಿಸಿದ ಮನವಿಯಲ್ಲಿ, ಗದಗ ಜಿಲ್ಲೆಯ ಬಡ ಹಾಗೂ ಮಧ್ಯಮ ವರ್ಗದ ಜನರು ಸರ್ಕಾರಿ ಆಸ್ಪತ್ರೆಯನ್ನೇ ಆಶ್ರಯಿಸುತ್ತಾರೆ. ಆದರೆ ಆಸ್ಪತ್ರೆಯಲ್ಲಿ ವೈದ್ಯರು ಹಾಗೂ ಸಿಬ್ಬಂದಿ ರೋಗಿಗಳೊಂದಿಗೆ ನಿರ್ಲಕ್ಷ್ಯದ ಧೋರಣೆ ತಾಳುತ್ತಿದ್ದು, ತುರ್ತು ಚಿಕಿತ್ಸೆ ನೀಡುವಲ್ಲಿಯೂ ವಿಳಂಬ ಮಾಡುತ್ತಿದ್ದಾರೆ ಎಂದು ಆರೋಪಿಸಲಾಗಿದೆ.

ಆಸ್ಪತ್ರೆಯಲ್ಲಿ ಔಷಧಿ, ಸ್ಕ್ಯಾನ್ ಸೇರಿದಂತೆ ಅಗತ್ಯ ಸೌಲಭ್ಯಗಳಿಲ್ಲ ಎಂದು ಹೇಳಿ ರೋಗಿಗಳನ್ನು ಹೊರಗಿನಿಂದ ಔಷಧಿ ಹಾಗೂ ವೈದ್ಯಕೀಯ ಸಾಮಗ್ರಿಗಳನ್ನು ಖರೀದಿಸಲು ಒತ್ತಾಯಿಸಲಾಗುತ್ತಿದೆ.



ಬಿಪಿಎಲ್ ಕುಟುಂಬಗಳಿಗೆ ಉಚಿತ ಚಿಕಿತ್ಸೆ ಹಾಗೂ ಔಷಧಿ ನೀಡುವ ಸರ್ಕಾರದ ಯೋಜನೆಗಳು ಆಸ್ಪತ್ರೆಯಲ್ಲಿ ಸಮರ್ಪಕವಾಗಿ ಅನುಷ್ಠಾನವಾಗುತ್ತಿಲ್ಲ ಎಂದು ದೂರಲಾಗಿದೆ.

ಜಿಮ್ಸ್ ಆಸ್ಪತ್ರೆಯಲ್ಲಿ ಈ ಹಿಂದೆಯೂ ವೈದ್ಯರ ಹಾಗೂ ಸಿಬ್ಬಂದಿಯ ನಿರ್ಲಕ್ಷ್ಯದಿಂದ ರೋಗಿಗಳ ಸಾವು-ನೋವು ಸಂಭವಿಸಿರುವ ಘಟನೆಗಳು ನಡೆದಿವೆ. ಆದರೂ ಆಡಳಿತ ಎಚ್ಚೆತ್ತುಕೊಂಡಿಲ್ಲ. ಬಡ ರೋಗಿಗಳಿಗೆ ಗುಣಮಟ್ಟದ ಚಿಕಿತ್ಸೆ ಹಾಗೂ ಅಗತ್ಯ ಸೌಲಭ್ಯಗಳನ್ನು ಒದಗಿಸಿ, ಕರ್ತವ್ಯಲೋಪ ಎಸಗಿರುವ ವೈದ್ಯರು, ಸಿಬ್ಬಂದಿ ಹಾಗೂ ಜಿಮ್ಸ್ ನಿರ್ದೇಶಕರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಲಾಗಿದೆ.

ಬೇಡಿಕೆಗಳನ್ನು ಗಂಭೀರವಾಗಿ ಪರಿಗಣಿಸದಿದ್ದರೆ ಗದಗ ಜಿಲ್ಲಾ ಸ್ಲಂ ಸಮಿತಿಯ ನೇತೃತ್ವದಲ್ಲಿ ಜಿಮ್ಸ್ ಆಸ್ಪತ್ರೆ ಎದುರು ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಮನವಿಯಲ್ಲಿ ಎಚ್ಚರಿಕೆ ನೀಡಲಾಗಿದೆ.

ಇದೇ ವೇಳೆ ಬೆಟಗೇರಿ ಸರ್ಕಾರಿ ಆಸ್ಪತ್ರೆಯಲ್ಲೂ ರೋಗಿಗಳು ಎದುರಿಸುತ್ತಿರುವ ಸಮಸ್ಯೆಗಳನ್ನು ಪರಿಹರಿಸುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳಿಗೆ ಪ್ರತ್ಯೇಕ ಮನವಿ ಸಲ್ಲಿಸಲಾಗಿದೆ.

ಮನವಿ ಸಲ್ಲಿಸುವ ಸಂದರ್ಭದಲ್ಲಿ ಎಂ.ಬಿ. ನದಾಫ್ (ವಕೀಲರು), ಪರವೀನಬಾನು ಹವಾಲ್ದಾರ, ಪುಷ್ಪಾ ಬಿಜಾಪುರ, ಇಬ್ರಾಹಿಂ ಮುಲ್ಲಾ, ಶರಣಪ್ಪ ಸೂಡಿ, ಮೌಲಾಸಾಬ ಗಚ್ಚಿ, ಮಕ್ತುಮಸಾಬ ಮುಲ್ಲಾನವರ, ಖಾಜಾಸಾಬ ಬಳ್ಳಾರಿ, ನಜಮುನಿಸಾ ಮುರಗೋಡ, ಸಾಕ್ರುಬಾಯಿ ಗೋಸಾವಿ, ಹುಸೇನ ಮುಲ್ಲಾನವರ ಸೇರಿದಂತೆ ಸ್ಲಂ ಸಮಿತಿಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

> **ಬಡವರಿಗೆ ಉಚಿತ ಚಿಕಿತ್ಸೆ ಮತ್ತು ಔಷಧಿ ನೀಡಬೇಕಾದ ಸರ್ಕಾರಿ ಆಸ್ಪತ್ರೆಯಲ್ಲೇ ರೋಗಿಗಳು ಪರದಾಡುವ ಸ್ಥಿತಿ ನಿರ್ಮಾಣವಾಗಿದೆ. ಜಿಮ್ಸ್‌ನಲ್ಲಿ ನಡೆಯುತ್ತಿರುವ ನಿರ್ಲಕ್ಷ್ಯಕ್ಕೆ ಕಡಿವಾಣ ಹಾಕಿ, ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಇಲ್ಲವಾದರೆ ಜಿಮ್ಸ್ ಆಸ್ಪತ್ರೆ ಎದುರು ಉಗ್ರ ಹೋರಾಟ ನಡೆಸಲಾಗುವುದು.**
>
> **- ಇಮ್ತಿಯಾಜ್ ಆರ್. ಮಾನ್ವಿ,**
> ಅಧ್ಯಕ್ಷರು, ಗದಗ ಜಿಲ್ಲಾ ಸ್ಲಂ ಸಮಿತಿ

## ರಾಷ್ಟ್ರರಕ್ಷಣೆಯಲ್ಲಿ ಪ್ರತಿಯೊಬ್ಬರೂ ಜವಾಬ್ದಾರಿ ಅರಿಯಬೇಕು

**ವಿಜಯಸಾಕ್ಷಿ ಸುದ್ದಿ, ಗದಗ**

ಶ್ರೀ ಜ. ಶಿವಾನಂದ ಪಿಯು ಕಾಲೇಜು ಹಾಗೂ ರಾಷ್ಟ್ರೋತ್ಥಾನ ಪರಿಷತ್, ಬೆಂಗಳೂರು ಇವರ ಸಂಯುಕ್ತ ಆಶ್ರಯದಲ್ಲಿ ಕಾರ್ಗಿಲ್ ವಿಜಯೋತ್ಸವವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.




ಕಾರ್ಯಕ್ರಮದಲ್ಲಿ ರಾಷ್ಟ್ರೋತ್ಥಾನ ಪರಿಷತ್‌ನ ಕೋ-ಆರ್ಡಿನೇಟರ್ ವೀರೇಂದ್ರ ಪಾಟೀಲ ಮಾತನಾಡಿ, ಕಾರ್ಗಿಲ್ ಯುದ್ಧದ ಪ್ರಸಂಗಗಳನ್ನು ಉದಾಹರಣೆಗಳೊಂದಿಗೆ ವಿವರಿಸಿ, ದೇಶಭಕ್ತಿ, ರಾಷ್ಟ್ರರಕ್ಷಣೆ ಹಾಗೂ ಸೈನಿಕರ ತ್ಯಾಗದ ಮಹತ್ವವನ್ನು ವಿದ್ಯಾರ್ಥಿಗಳಿಗೆ ಮನಮುಟ್ಟುವ ರೀತಿಯಲ್ಲಿ ತಿಳಿಸಿದರು. ಪ್ರತಿಯೊಬ್ಬ ನಾಗರಿಕನಲ್ಲೂ ರಾಷ್ಟ್ರಪ್ರೇಮ ಮತ್ತು ಜವಾಬ್ದಾರಿಯ ಮನೋಭಾವ ಬೆಳೆಯಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಉಪನ್ಯಾಸಕ ಎಂ.ಪಿ. ಮಂಟೂರ ಮಾತನಾಡಿ, ಸ್ವಸ್ಥ, ಸುಸ್ಥಿರ ಹಾಗೂ ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕು. ದೇಶಾಭಿಮಾನ ಮತ್ತು ಸಾಮಾಜಿಕ ಜವಾಬ್ದಾರಿಯನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ವೇದಿಕೆಯಲ್ಲಿ ಕಾಲೇಜಿನ ಪ್ರಾಚಾರ್ಯ ಎಸ್.ವಿ. ವೆರ್ಣೇಕರ ಉಪಸ್ಥಿತರಿದ್ದರು.

ಕಾರ್ಯಕ್ರಮದ ಆರಂಭದಲ್ಲಿ ಸ್ನೇಹಾ ಹೊಂಬಳ ಹಾಗೂ ವರ್ಷಾ ಬಸವಾ ಪ್ರಾರ್ಥನೆ ಸಲ್ಲಿಸಿದರು. ಎಸ್.ಬಿ. ಹಿರೇಮಠ ಪ್ರಾಸ್ತಾವಿಕವಾಗಿ ಮಾತನಾಡಿದರು. ಪವಿತ್ರಾ ಎಸ್.ಕೆ. ಸ್ವಾಗತಿಸಿ, ಕಾರ್ಯಕ್ರಮ ನಿರೂಪಿಸಿ ವಂದಿಸಿದರು. ವಂದೇ ಮಾತರಂ ಗೀತೆಯೊಂದಿಗೆ ಕಾರ್ಯಕ್ರಮ ಮುಕ್ತಾಯಗೊಂಡಿತು. ಕಾರ್ಯಕ್ರಮದಲ್ಲಿ ಕಾಲೇಜಿನ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು.

### ವರ್ಗಾವಣೆಗೊಂಡ ಡಿಪೋ ವ್ಯವಸ್ಥಾಪಕಿ ಸವಿತಾ ಆದಿಗೆ ಬೀಳ್ಕೊಡುಗೆ

## ಶಕ್ತಿ ಯೋಜನೆ ಯಶಸ್ವಿ ಜಾರಿಗೆ ಶ್ರಮಿಸಿದ ಅಧಿಕಾರಿಗೆ ಗೌರವ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಲಕ್ಷ್ಮೇಶ್ವರ ಕೆಎಸ್‌ಆರ್‌ಟಿಸಿ ಘಟಕದ ವ್ಯವಸ್ಥಾಪಕರಾಗಿ ಕಾರ್ಯನಿರ್ವಹಿಸಿ ಗದಗ ವಿಭಾಗೀಯ ಕಚೇರಿಯ ಸಹಾಯಕ ಸಂಚಾರ ವ್ಯವಸ್ಥಾಪಕರಾಗಿ ವರ್ಗಾವಣೆಗೊಂಡಿರುವ ಸವಿತಾ ಆದಿ ಅವರನ್ನು ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸಭೆಯಲ್ಲಿ ಸನ್ಮಾನಿಸಿ ಆತ್ಮೀಯವಾಗಿ ಬೀಳ್ಕೊಡಲಾಯಿತು.



ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ನಾಗರಾಜ ಮಡಿವಾಳರ ಮಾತನಾಡಿ, ಸವಿತಾ ಆದಿ ಅವರು ಲಕ್ಷ್ಮೇಶ್ವರ ಘಟಕದಲ್ಲಿ ಆಡಳಿತಾತ್ಮಕ ದಕ್ಷತೆ, ಕಾರ್ಯನಿಷ್ಠೆ ಹಾಗೂ ಸಾರ್ವಜನಿಕ ಸ್ನೇಹಿ ಸೇವೆಯ ಮೂಲಕ ಉತ್ತಮ ಹೆಸರು ಗಳಿಸಿದ್ದಾರೆ ಎಂದು ಶ್ಲಾಘಿಸಿದರು.

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಶಕ್ತಿ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಿ ಮಹಿಳಾ ಪ್ರಯಾಣಿಕರಿಗೆ ಯಾವುದೇ ತೊಂದರೆಯಾಗದಂತೆ ಸೇವೆ ಒದಗಿಸಿರುವುದು ಶ್ಲಾಘನೀಯವಾಗಿದೆ. ಅವರ ಸೇವಾ ಮನೋಭಾವ ಇತರ ಅಧಿಕಾರಿಗಳಿಗೆ ಮಾದರಿಯಾಗಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಲಕ್ಷ್ಮೇಶ್ವರ ಕೆಎಸ್‌ಆರ್‌ಟಿಸಿ ಘಟಕದ ನೂತನ ವ್ಯವಸ್ಥಾಪಕರಾಗಿ ಅಧಿಕಾರ ಸ್ವೀಕರಿಸಿರುವ ಪವಿತ್ರಾ ಪಿ. ಅವರನ್ನು ಸಮಿತಿ ವತಿಯಿಂದ ಆತ್ಮೀಯವಾಗಿ ಸ್ವಾಗತಿಸಲಾಯಿತು.

ಸಾರ್ವಜನಿಕ ಸ್ನೇಹಿ ಆಡಳಿತಕ್ಕೆ ಆದ್ಯತೆ ನೀಡಿ ಶಕ್ತಿ ಸೇರಿದಂತೆ ಸರ್ಕಾರದ ವಿವಿಧ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಶ್ರಮಿಸುವಂತೆ ಶುಭ ಹಾರೈಸಲಾಯಿತು.

ಕಾರ್ಯಕ್ರಮದಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸದಸ್ಯರು, ತಾಲೂಕು ಪಂಚಾಯಿತಿ ಅಧಿಕಾರಿಗಳು, ಕೆಎಸ್‌ಆರ್‌ಟಿಸಿ ಸಿಬ್ಬಂದಿ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಗೊಲ್ಲ ಸಮುದಾಯಕ್ಕೆ ಸಚಿವ ಸ್ಥಾನ ನೀಡಲು ಆಗ್ರಹ

**ವಿಜಯಸಾಕ್ಷಿ ಸುದ್ದಿ, ಗದಗ**



ರಾಜ್ಯ ಸಚಿವ ಸಂಪುಟ ವಿಸ್ತರಣೆಯಲ್ಲಿ ಗೊಲ್ಲ (ಯಾದವ) ಸಮುದಾಯದ ಶಾಸಕರಿಗೆ ಸಚಿವ ಸ್ಥಾನ ನೀಡದಿರುವುದನ್ನು ಖಂಡಿಸಿರುವ ಗದಗ ಜಿಲ್ಲಾ ಗೊಲ್ಲ (ಯಾದವ) ಸಂಘ, ಶಾಸಕ ಡಿ.ಟಿ. ಶ್ರೀನಿವಾಸ್ ಹಾಗೂ ಶಾಸಕ ಎಂ. ನಾಗರಾಜ್ ಅವರಿಗೆ ಸಚಿವ ಸ್ಥಾನ ನೀಡುವಂತೆ ಕಾಂಗ್ರೆಸ್ ಹೈಕಮಾಂಡ್‌ಗೆ ಆಗ್ರಹಿಸಿದೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಗದಗ ಜಿಲ್ಲಾ ಗೊಲ್ಲ (ಯಾದವ) ಸಂಘದ ಅಧ್ಯಕ್ಷ ಹಾಗೂ ಕರ್ನಾಟಕ ರಾಜ್ಯ ಗೊಲ್ಲ (ಯಾದವ) ಸಂಘದ ಕಾರ್ಯಕಾರಿಣಿ ಸದಸ್ಯ ಹರೀಶ ಪೂಜಾರ, ದಿವಂಗತ ಎ. ಕೃಷ್ಣಪ್ಪ ಹಾಗೂ ಮುನಿಯಪ್ಪ ಮುದ್ದಪ್ಪ ಅವರ ನಂತರ ಯಾವುದೇ ಸರ್ಕಾರದಲ್ಲಿ ಗೊಲ್ಲ ಸಮುದಾಯಕ್ಕೆ ಸಚಿವ ಸ್ಥಾನ ದೊರೆತಿಲ್ಲ. ಇದು ಸಮುದಾಯದ ನಿರ್ಲಕ್ಷ್ಯದ ಸಂಕೇತವಾಗಿದ್ದು, ತಕ್ಷಣವೇ ಈ ಅನ್ಯಾಯವನ್ನು ಸರಿಪಡಿಸಬೇಕು ಎಂದು ಒತ್ತಾಯಿಸಿದ್ದಾರೆ.

ಗೊಲ್ಲ (ಯಾದವ) ಸಮುದಾಯಕ್ಕೆ ರಾಜಕೀಯ ಪ್ರಾತಿನಿಧ್ಯ ಕಲ್ಪಿಸುವ ನಿಟ್ಟಿನಲ್ಲಿ ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಹಿರಿಯ ನಾಯಕಿ ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಹಾಗೂ ಪ್ರಿಯಾಂಕಾ ಗಾಂಧಿ ಅವರು ಮಧ್ಯಪ್ರವೇಶಿಸಿ, ಡಿ.ಟಿ. ಶ್ರೀನಿವಾಸ್ ಹಾಗೂ ಎಂ. ನಾಗರಾಜ್ ಅವರಿಗೆ ಸಚಿವ ಸ್ಥಾನ ನೀಡುವ ಮೂಲಕ ಸಮುದಾಯಕ್ಕೆ ನ್ಯಾಯ ಒದಗಿಸಬೇಕು ಎಂದು ಪ್ರಕಟಣೆಯಲ್ಲಿ ಮನವಿ ಮಾಡಲಾಗಿದೆ.

## ಶಿಕ್ಷಕರ ಸಂಘಕ್ಕೆ ಹೊಸ ಪದಾಧಿಕಾರಿಗಳ ನೇಮಕ

**ವಿಜಯಸಾಕ್ಷಿ ಸುದ್ದಿ, ಡಂಬಳ**



ಗದಗ ಜಿಲ್ಲಾ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಉಪಾಧ್ಯಕ್ಷರಾಗಿ ಡಂಬಳ ಹೋಬಳಿ ಪೇಠಾಲೂರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಕನ್ನಡ ಹೆಣ್ಣು ಮಕ್ಕಳ ಶಾಲೆಯ ಶಿಕ್ಷಕ ಎಂ.ಎಂ. ಬಂಡಿ ಅವರನ್ನು ಜಿಲ್ಲಾ ಘಟಕದ ಅಧ್ಯಕ್ಷ ವಿ.ಎಂ. ಹಿರೇಮಠ ನಾಮನಿರ್ದೇಶನ ಮಾಡಿ ಆದೇಶ ಹೊರಡಿಸಿದ್ದಾರೆ. ಇದೇ ವೇಳೆ ಎಂ.ಜಿ. ಕಿತ್ತೂರ ಅವರನ್ನು ಸಹ ಕಾರ್ಯದರ್ಶಿಯಾಗಿ, ಮಂಜುನಾಥ ಬಿ. ಹಾಗೂ ಮಹೇಶ ಕುಂಬಾರ ಅವರನ್ನು ಸಂಘಟನಾ ಕಾರ್ಯದರ್ಶಿಗಳಾಗಿ, ಶ್ರೀಮತಿ ರಜಿಯಾಬೇಗಂ ನದಾಫ್ ಅವರನ್ನು ಸಹ ಕಾರ್ಯದರ್ಶಿಯಾಗಿ ನೇಮಕ ಮಾಡಲಾಗಿದೆ.

ನೂತನ ಪದಾಧಿಕಾರಿಗಳಾಗಿ ಆಯ್ಕೆಯಾದವರಿಗೆ ತಾಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ನಾಗರಾಜ ಹಳ್ಳಿಕೇರಿ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಎಂ.ಪಿ. ಶಿರನಹಳ್ಳಿ ಸೇರಿದಂತೆ ಶಿಕ್ಷಕರ ಸಂಘದ ಪದಾಧಿಕಾರಿಗಳು ಹಾಗೂ ಶಿಕ್ಷಕರು ಅಭಿನಂದನೆ ಸಲ್ಲಿಸಿ, ಸಂಘದ ಅಭಿವೃದ್ಧಿಗೆ ಉತ್ತಮ ಸೇವೆ ಸಲ್ಲಿಸುವಂತೆ ಶುಭ ಹಾರೈಸಿದರು.

## ಮಾಜಿ ಸೈನಿಕರ ಮಕ್ಕಳಿಗೆ ನಗದು ಪ್ರಶಸ್ತಿಗೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

2026-27ನೇ ಶೈಕ್ಷಣಿಕ ಸಾಲಿನಲ್ಲಿ ನಡೆದ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಸಾರ್ವಜನಿಕ ಪರೀಕ್ಷೆಗಳಲ್ಲಿ ಗರಿಷ್ಠ ಅಂಕ ಗಳಿಸಿದ ಮಾಜಿ ಸೈನಿಕರ ಮಕ್ಕಳಿಗೆ ಜನರಲ್ ಕೆ.ಎಸ್. ತಿಮ್ಮಯ್ಯ ನಗದು ಪ್ರಶಸ್ತಿ ನೀಡಲು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಅರ್ಜಿ ಆಹ್ವಾನಿಸಿದೆ.

ಧಾರವಾಡ, ಹಾವೇರಿ, ಗದಗ, ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಗಳ ಕರ್ನಾಟಕ ಮೂಲದ ಮಾಜಿ ಸೈನಿಕರ ಮಕ್ಕಳು ಈ ಪ್ರಶಸ್ತಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿಗಳನ್ನು ಜಂಟಿ ನಿರ್ದೇಶಕರ ಕಚೇರಿ, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಧಾರವಾಡದಲ್ಲಿ ಪಡೆಯಬಹುದಾಗಿದೆ. ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸಲು ನವೆಂಬರ್ 30 ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಂಟಿ ನಿರ್ದೇಶಕರ ಕಚೇರಿ, ಧಾರವಾಡವನ್ನು ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

### ನಿವೃತ್ತ ಶಿಕ್ಷಕ ರಂಗನಾಥ ಹವಾಲ್ದಾರ್ ಅವರಿಗೆ ಅಪೂರ್ವ ಸನ್ಮಾನ, ಪುಸ್ತಕ ವಿತರಣೆ ವಿಶೇಷ

# ಗುರುವಿನ ಸೇವೆಗೆ ಗೌರವದ ಸಂಭ್ರಮ




**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಶಿಕ್ಷಕರಾಗಿ ಸಾವಿರಾರು ವಿದ್ಯಾರ್ಥಿಗಳ ಬದುಕಿಗೆ ಬೆಳಕಾದ ನಿವೃತ್ತ ಶಿಕ್ಷಕ ರಂಗನಾಥ ಹವಾಲ್ದಾರ್ ಅವರ ನಿವೃತ್ತಿ ಹಬ್ಬವನ್ನು ಬಂಧು-ಬಳಗ, ಶಿಷ್ಯರು ಹಾಗೂ ಸ್ನೇಹಿತರ ಸಮ್ಮುಖದಲ್ಲಿ ವಿಶಿಷ್ಟವಾಗಿ ಆಚರಿಸಲಾಯಿತು.

ಪಟ್ಟಣದ ಶ್ರೀ ವೆಂಕಟೇಶ್ವರಸ್ವಾಮಿ ದೇವಸ್ಥಾನದ ಛತ್ರದಲ್ಲಿ ನಡೆದ ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳ ಗಣ್ಯರು ಭಾಗವಹಿಸಿ ರಂಗನಾಥ ಹವಾಲ್ದಾರ್ ಅವರ ಶಿಕ್ಷಣ, ಸಾಹಿತ್ಯ ಹಾಗೂ ಸಮಾಜಮುಖಿ ಸೇವೆಯನ್ನು ಸ್ಮರಿಸಿದರು.

ಮುಖ್ಯ ಅತಿಥಿಯಾಗಿ ಮಾತನಾಡಿದ ಬೆಂಗಳೂರಿನ ಮಠಾಧೀಶರು, ರಂಗನಾಥ ಹವಾಲ್ದಾರ್ ಅವರು ಕೇವಲ ಶಿಕ್ಷಕರಾಗಿಯೇ ಸೀಮಿತರಾಗದೆ, ಸಾಮಾಜಿಕ ಸಂಘಟನೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡು ವೈಚಾರಿಕ ಚಿಂತನೆಗಳ ಮೂಲಕ ಸಮಾಜಕ್ಕೆ ಉತ್ತಮ ಸಂದೇಶ ನೀಡಿದ್ದಾರೆ. ಪ್ರಾಮಾಣಿಕತೆ, ನಿಷ್ಠೆ ಹಾಗೂ ಕರ್ತವ್ಯಪ್ರಜ್ಞೆಯಿಂದ ಸೇವೆ ಸಲ್ಲಿಸಿದ ಅವರಿಗೆ ನಿವೃತ್ತಿ ಜೀವನ ಸುಖ-ಶಾಂತಿಯಿಂದ ಕೂಡಿರಲಿ ಎಂದು ಹಾರೈಸಿದರು.

ರಾಜ್ಯ ರೈತ ಸಂಘದ ಅಧ್ಯಕ್ಷ ಹಾಗೂ ಹಿರಿಯ ಹೋರಾಟಗಾರ ಜೆ.ಎಂ. ವೀರಸಂಗಯ್ಯ ಮಾತನಾಡಿ, ರೈತರ ಸಮಸ್ಯೆಗಳು ಹಾಗೂ ಸ್ಮಾರ್ಟ್ ಮೀಟರ್ ವಿಚಾರ ಪ್ರಸ್ತಾಪಿಸಿ, ರೈತರ ಹಿತಾಸಕ್ತಿಯನ್ನು ಕಾಪಾಡುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ ಎಂದು ಹೇಳಿದರು.

ನಿವೃತ್ತ ಶಿಕ್ಷಕ ರಂಗನಾಥ ಹವಾಲ್ದಾರ್ ಮಾತನಾಡಿ, ಶಿಕ್ಷಕರಾಗುವ ಮೊದಲು ಅನುವಾದಕ ಹಾಗೂ ಪತ್ರಕರ್ತರಾಗಿ ಕೆಲಸ ಮಾಡಿದ ಅನುಭವ, ದಿನಕ್ಕೆ ಕೇವಲ ಹತ್ತು ರೂಪಾಯಿ ಸಂಬಳಕ್ಕೆ ಖಾಸಗಿ ಶಾಲೆಯಲ್ಲಿ ಶಿಕ್ಷಕರಾಗಿ ಕಾರ್ಯನಿರ್ವಹಿಸಿದ ದಿನಗಳು ಹಾಗೂ ತಮ್ಮ ತಂದೆಯ ಕಷ್ಟದ ಬದುಕನ್ನು ಸ್ಮರಿಸಿ ಭಾವುಕರಾದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಗಣ್ಯರಿಗೆ ಪುಸ್ತಕಗಳನ್ನು ಉಡುಗೊರೆಯಾಗಿ ನೀಡುವ ಮೂಲಕ ತಮ್ಮ ಸಾಹಿತ್ಯಾಭಿಮಾನವನ್ನು ಅವರು ವ್ಯಕ್ತಪಡಿಸಿದರು. ರಂಗನಾಥ ಹವಾಲ್ದಾರ್ ಅವರ ಸಹೋದರ ಗಣೇಶ್ ಹವಾಲ್ದಾರ್ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ನಿರೂಪಿಸಿದರು. ಸಸಿಗೆ ನೀರೆರೆಯುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ವೇದಿಕೆಯಲ್ಲಿ ಸಿಪಿಎಂ ಮುಖಂಡ ಗುರುಶಾಂತ ಚಿಂತರಪಳ್ಳಿ, ನಿವೃತ್ತ ಶಿಕ್ಷಕರಾದ ಚಂದ್ರಶೇಖರರಾವ್ ಸೇರಿದಂತೆ ವಿವಿಧ ಕ್ಷೇತ್ರಗಳ ಗಣ್ಯರು ಉಪಸ್ಥಿತರಿದ್ದರು. ಅಲ್ಲದೆ ಪಟ್ಟಣದ ಸಾಹಿತಿಗಳು, ನಿವೃತ್ತ ಶಿಕ್ಷಕರು, ಬಂಧುಗಳು, ಸ್ನೇಹಿತರು ಹಾಗೂ ಅಪಾರ ಸಂಖ್ಯೆಯ ಶಿಷ್ಯರು ಭಾಗವಹಿಸಿ ರಂಗನಾಥ ಹವಾಲ್ದಾರ್ ಅವರನ್ನು ಅಭಿನಂದಿಸಿದರು.

### ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಲು ಇನ್ನರ್ ವೀಲ್ ಕ್ಲಬ್ ವಿಶೇಷ ಕಾರ್ಯಕ್ರಮ

# ನಾಳಿನ ಸಮಾಜಕ್ಕಾಗಿ ಇಂದೇ ವ್ಯಸನ ವಿರೋಧಿ ಸಂಕಲ್ಪ



**ವಿಜಯಸಾಕ್ಷಿ ಸುದ್ದಿ, ಗದಗ**

ಮಾದಕ ವ್ಯಸನದ ದುಷ್ಪರಿಣಾಮಗಳ ಕುರಿತು ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಇನ್ನರ್ ವೀಲ್ ಕ್ಲಬ್ ಗದಗ-ಬೆಟಗೇರಿ ವತಿಯಿಂದ ನಗರದ ಸರ್ಕಾರಿ ಬಾಲಕಿಯರ ಹಿರಿಯ ಪ್ರಾಥಮಿಕ ಶಾಲೆ (ನಂ.2)ಯಲ್ಲಿ ಪ್ರಬಂಧ ಸ್ಪರ್ಧೆ ಆಯೋಜಿಸಿ ವಿಜೇತ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಕ್ಲಬ್ ಅಧ್ಯಕ್ಷೆ ಮಂಜುಳಾ ಅಕ್ಕಿ, ಇಂತಹ ಜಾಗೃತಿ ಕಾರ್ಯಕ್ರಮಗಳು ವಿದ್ಯಾರ್ಥಿಗಳಲ್ಲಿ ಉತ್ತಮ ಮೌಲ್ಯಗಳನ್ನು ಬೆಳೆಸುವುದರ ಜೊತೆಗೆ ಸಮಾಜದಲ್ಲಿ ಮಾದಕ ವ್ಯಸನ ತಡೆಗೆ ಸಹಕಾರಿಯಾಗಲಿವೆ ಎಂದು ಹೇಳಿದರು.

ಪ್ರಬಂಧ ಸ್ಪರ್ಧೆಯಲ್ಲಿ ಐದನೇ ತರಗತಿಯ ಜಯಶ್ರೀ ಕೊತಬಾಳ, ವಿದ್ಯಾಶ್ರೀ ಕನ್ನೂರ ಹಾಗೂ ಮುಸ್ಕಾನ್ ಇಲಿ, ಆರನೇ ತರಗತಿಯ ಶಿಫಾ ಎಂಡಿಗೇರಿ, ಅರ್ಪಿತಾ ಮರಾಠಿ ಹಾಗೂ ಸಫಾ ಪಾಟೀಲ್, ಏಳನೇ ತರಗತಿಯ ಪ್ರಿಯಾಂಕ ಹಡಪದ, ಜಾಕಿರಾ ನದಾಫ್ ಹಾಗೂ ಶ್ರೀದೇವಿ ಅಯಾರ್ ಕ್ರಮವಾಗಿ ಪ್ರಥಮ, ದ್ವಿತೀಯ ಮತ್ತು ತೃತೀಯ ಸ್ಥಾನ ಪಡೆದರು. ಕ್ಲಬ್ ವತಿಯಿಂದ ವಿಜೇತರಿಗೆ ಬಹುಮಾನ ಹಾಗೂ ಎಲ್ಲ ವಿದ್ಯಾರ್ಥಿಗಳಿಗೆ ಪೆನ್ನು ಮತ್ತು ಸಿಹಿ ವಿತರಿಸಲಾಯಿತು.

ಶಾಲೆಯ ಮುಖ್ಯೋಪಾಧ್ಯಾಯರಾದ ಕೆ.ಎಂ. ರೇಷ್ಮಿ ಮಾತನಾಡಿ, ಇನ್ನರ್ ವೀಲ್ ಕ್ಲಬ್‌ನ ಸಮಾಜಮುಖಿ ಸೇವೆಯನ್ನು ಶ್ಲಾಘಿಸಿದರು. ಶಾಲೆಯ ಸಂಪನ್ಮೂಲ ವ್ಯಕ್ತಿ ಕವಿತಾ ದಂಡಿನ ಕಾರ್ಯಕ್ರಮದ ಯಶಸ್ಸಿಗೆ ಸಹಕರಿಸಿದರು.

ಈ ಸಂದರ್ಭದಲ್ಲಿ ಕ್ಲಬ್‌ನ ಉಪಾಧ್ಯಕ್ಷೆ ಶಿವಲೀಲಾ ಅಕ್ಕಿ, ಕಾರ್ಯದರ್ಶಿ ಪೂಜಾ ಭೂಮಾ, ಸಂಪಾದಕಿ ಮೀನಾಕ್ಷಿ ಕೊರವನವರ, ಸಿಪಿಸಿಸಿ ಜಯಶ್ರೀ ಉಗಲಾಟದ, ಕೋ-ಸಿಪಿಸಿಸಿ ಶಾರದಾ ಸಜ್ಜನರ, ಮಾಜಿ ಅಧ್ಯಕ್ಷೆ ನೀಲಾಂಬಿಕಾ ಉಗಲಾಟದ, ಹಿರಿಯ ಸದಸ್ಯೆ ಸುಶೀಲಾ ಕೋಟಿ, ಶಿಕ್ಷಕರಾದ ಇಂದಿರಾಬಾಯಿ ಎಸ್.ವಿ., ಪಿ.ಎಫ್. ನಾಗನೂರ ಸೇರಿದಂತೆ ಬೋಧಕ-ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಖಜಾಂಚಿ ವೀಣಾ ಕಾವೇರಿ ನಿರೂಪಿಸಿದರು.

## ಸಂಕ್ಷಿಪ್ತ ಸುದ್ದಿಗಳು

# ಸ್ವಯಂ ನಿವೃತ್ತಿ: ಹೇಮನಗೌಡ ಪಾಟೀಲರಿಗೆ ಸನ್ಮಾನ



**ವಿಜಯಸಾಕ್ಷಿ ಸುದ್ದಿ, ಗದಗ**

ಆರೋಗ್ಯ ಇಲಾಖೆಯಲ್ಲಿ 33 ವರ್ಷಗಳ ಕಾಲ ನಿಷ್ಠೆ, ಪ್ರಾಮಾಣಿಕತೆ ಹಾಗೂ ಸಮರ್ಪಣಾ ಮನೋಭಾವದಿಂದ ಸೇವೆ ಸಲ್ಲಿಸಿ ಸ್ವಯಂ ನಿವೃತ್ತಿ ಹೊಂದಿದ ಹೇಮನಗೌಡ ಪಾಟೀಲ ಅವರಿಗೆ ಆರೋಗ್ಯ ನಿರೀಕ್ಷಣಾಧಿಕಾರಿಗಳ ಸಂಘದ ಗದಗ ಜಿಲ್ಲಾ ಘಟಕ ಹಾಗೂ ವೇರಿ ಗುಡ್ ಮಾರ್ನಿಂಗ್ ಕನ್ನಡ ದಿನಪತ್ರಿಕೆ ವತಿಯಿಂದ ಆತ್ಮೀಯ ಸನ್ಮಾನ ಕಾರ್ಯಕ್ರಮ ನಡೆಯಿತು. ನಗರದ ವೇರಿ ಗುಡ್ ಮಾರ್ನಿಂಗ್ ದಿನಪತ್ರಿಕೆ ಕಚೇರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಗದಗ ಜಿಲ್ಲಾ ಕಾರ್ಯಾಧ್ಯಕ್ಷ ಸಿದ್ದಪ್ಪ ಲಿಂಗದಾಳ ಮಾತನಾಡಿ, ಹೇಮನಗೌಡ ಪಾಟೀಲ ಅವರು ತಮ್ಮ ಸೇವಾವಧಿಯಲ್ಲಿ ಕರ್ತವ್ಯನಿಷ್ಠೆ ಮತ್ತು ಪ್ರಾಮಾಣಿಕತೆಯಿಂದ ಕಾರ್ಯನಿರ್ವಹಿಸಿ ಇಲಾಖೆಗೆ ಉತ್ತಮ ಕೊಡುಗೆ ನೀಡಿದ್ದಾರೆ. ಅವರ ನಿವೃತ್ತಿ ಜೀವನ ಆರೋಗ್ಯ, ನೆಮ್ಮದಿ ಹಾಗೂ ಸಂತೋಷದಿಂದ ಕೂಡಿರಲಿ ಎಂದು ಶುಭ ಹಾರೈಸಿದರು. ಬಳಿಕ ಹೇಮನಗೌಡ ಪಾಟೀಲ ಅವರನ್ನು ಶಾಲು ಹೊದಿಸಿ, ಸ್ಮರಣಿಕೆ ನೀಡಿ ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ವೇರಿ ಗುಡ್ ಮಾರ್ನಿಂಗ್ ದಿನಪತ್ರಿಕೆಯ ಸಂಪಾದಕ ದೇವಪ್ಪ ಲಿಂಗದಾಳ, ಆಂಜನೇಯ ಬಳ್ಳಾರಿ, ಲಕ್ಷ್ಮಣ ಬಾಗಲಕೋಟೆ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಅಧ್ಯಕ್ಷ ಅಜಯಕುಮಾರ, ಆರೋಗ್ಯ ನಿರೀಕ್ಷಣಾಧಿಕಾರಿಗಳ ಸಂಘದ ಜಿಲ್ಲಾ ಅಧ್ಯಕ್ಷ ಬಿ.ಸಿ. ಹಿರೇಹಾಳ, ಶಾಮುವೆಲ್ ಕರಡಿಗುಡ್ಡ, ಎಸ್.ಬಿ. ಗಡಾದ ಸೇರಿದಂತೆ ಆರೋಗ್ಯ ಇಲಾಖೆಯ ಸಿಬ್ಬಂದಿ ಹಾಗೂ ಗಣ್ಯರು ಉಪಸ್ಥಿತರಿದ್ದು, ನಿವೃತ್ತಿ ಜೀವನಕ್ಕೆ ಶುಭ ಹಾರೈಸಿದರು.

# ಮಾಜಿ ಸೈನಿಕರ ಮಕ್ಕಳಿಗೆ ಶಿಷ್ಯವೇತನಕ್ಕೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

2026-27ನೇ ಶೈಕ್ಷಣಿಕ ಸಾಲಿನಲ್ಲಿ ವ್ಯಾಸಂಗ ಮಾಡುತ್ತಿರುವ ಮಾಜಿ ಸೈನಿಕರ ಮಕ್ಕಳಿಗೆ ಶಿಷ್ಯವೇತನ ಮಂಜೂರು ಮಾಡಲು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಅರ್ಜಿ ಆಹ್ವಾನಿಸಿದೆ. ಧಾರವಾಡ, ಹಾವೇರಿ, ಗದಗ, ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಗಳ ಕರ್ನಾಟಕ ಮೂಲದ ಮಿಲಿಟರಿ ಪಿಂಚಣಿದಾರ ಮಾಜಿ ಸೈನಿಕರ ಮಕ್ಕಳು ಈ ಸೌಲಭ್ಯಕ್ಕೆ ಅರ್ಹರಾಗಿದ್ದಾರೆ. ಒಂದನೇ ತರಗತಿಯಿಂದ ಅಂತಿಮ ವರ್ಷದ ಪದವಿ, ಡಿಪ್ಲೊಮಾ ಹಾಗೂ ವೃತ್ತಿಪರ ಪದವಿ ವ್ಯಾಸಂಗ ಮಾಡುತ್ತಿರುವ, ಸರ್ಕಾರದಿಂದ ಮಾನ್ಯತೆ ಪಡೆದ ಶಿಕ್ಷಣ ಸಂಸ್ಥೆಗಳ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು. ಅರ್ಜಿಗಳನ್ನು ಜಂಟಿ ನಿರ್ದೇಶಕರ ಕಚೇರಿ, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಧಾರವಾಡದಲ್ಲಿ ಪಡೆಯಬಹುದಾಗಿದೆ. ಒಂದನೇ ತರಗತಿಯಿಂದ ಅಂತಿಮ ವರ್ಷದ ಪದವಿ ಹಾಗೂ ಡಿಪ್ಲೊಮಾ ವಿದ್ಯಾರ್ಥಿಗಳಿಗೆ ಅರ್ಜಿ ಸಲ್ಲಿಸಲು ಅಕ್ಟೋಬರ್ 31 ಕೊನೆಯ ದಿನವಾಗಿದ್ದು, ವೃತ್ತಿಪರ ಪದವಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ನವೆಂಬರ್ 30 ಅಂತಿಮ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಂಟಿ ನಿರ್ದೇಶಕರ ಕಚೇರಿ, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಧಾರವಾಡವನ್ನು ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

# 38 ವರ್ಷ ದೇಶಸೇವೆ ಸಲ್ಲಿಸಿದ ಯೋಧನಿಗೆ ಅಭೂತಪೂರ್ವ ಸ್ವಾಗತ



**ವಿಜಯಸಾಕ್ಷಿ ಸುದ್ದಿ, ಗದಗ**

ಭಾರತೀಯ ಭದ್ರತಾ ಪಡೆಗಳಲ್ಲಿ 38 ವರ್ಷಗಳ ಕಾಲ ಸೇವೆ ಸಲ್ಲಿಸಿ ತಾಯ್ನಾಡಿಗೆ ಮರಳಿದ ಸಬ್ ಇನ್ಸ್‌ಪೆಕ್ಟರ್ ರಾಚಪ್ಪ ಮಸಗಿ ಅವರಿಗೆ ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಗದಗ ಜಿಲ್ಲಾ ಘಟಕದ ವತಿಯಿಂದ ಭವ್ಯ ಸ್ವಾಗತ ಹಾಗೂ ಸನ್ಮಾನ ಕಾರ್ಯಕ್ರಮ ನಡೆಯಿತು. ರೋಣ ತಾಲೂಕಿನ ನಾಗರಾಳ ಮೂಲದ ಹಾಗೂ ನರಸಾಪುರ ನಿವಾಸಿಯಾಗಿರುವ ರಾಚಪ್ಪ ಮಸಗಿ ಅವರು ಭಾರತೀಯ ಸೇನೆಯಲ್ಲಿ ಸುದೀರ್ಘ ಸೇವೆ ಸಲ್ಲಿಸಿ ವಾಪಸ್ಸಾದ ಹಿನ್ನೆಲೆಯಲ್ಲಿ, ಗದಗ ರೈಲ್ವೆ ನಿಲ್ದಾಣದಲ್ಲಿ ಮಾಜಿ ಸೈನಿಕರ ಸಂಘದ ಜಿಲ್ಲಾ ಅಧ್ಯಕ್ಷ ಬಸಲಿಂಗಪ್ಪ ಮುಂಡರಗಿ ನೇತೃತ್ವದಲ್ಲಿ ಹೂವಿನ ಸುರಿಮಳೆಗೈದು ಆತ್ಮೀಯವಾಗಿ ಬರಮಾಡಿಕೊಳ್ಳಲಾಯಿತು. ಬಳಿಕ ರೈಲ್ವೆ ನಿಲ್ದಾಣದಿಂದ ಹೆಲ್ತ್ ಕ್ಯಾಂಪ್, ಬೆಟಗೇರಿ ಮಾರ್ಗವಾಗಿ ನರಸಾಪುರದವರೆಗೆ ದೇಶಭಕ್ತಿ ಗೀತೆಗಳೊಂದಿಗೆ ಮೆರವಣಿಗೆ ನಡೆಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಸಂಘದ ಜಿಲ್ಲಾ ಅಧ್ಯಕ್ಷ ಬಸಲಿಂಗಪ್ಪ ಮುಂಡರಗಿ, ದೇಶದ ಗಡಿಯಲ್ಲಿ ತಮ್ಮ ಜೀವವನ್ನೇ ಪಣಕ್ಕಿಟ್ಟು ದೇಶವನ್ನು ಕಾಪಾಡುವ ಸೈನಿಕರ ಸೇವೆ ಅತ್ಯಂತ ಶ್ರೇಷ್ಠವಾಗಿದೆ. ಇಂದು ನಾವೆಲ್ಲರೂ ನೆಮ್ಮದಿಯಿಂದ ಬದುಕುತ್ತಿರುವುದಕ್ಕೆ ಭಾರತೀಯ ಸೈನಿಕರ ತ್ಯಾಗವೇ ಕಾರಣ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಪದಾಧಿಕಾರಿಗಳು, ಮಾಜಿ ಸೈನಿಕರು, ವೀರನಾರಿಯರು, ಅರೆಸೇನಾ ಪಡೆಗಳ ಯೋಧರು ಹಾಗೂ ನಾಗರಾಳ ಮತ್ತು ನರಸಾಪುರ ಗ್ರಾಮದ ಗಣ್ಯರು, ಸಾರ್ವಜನಿಕರು ಮತ್ತು ದೇಶಪ್ರೇಮಿಗಳು ಉಪಸ್ಥಿತರಿದ್ದರು.

# ಯುವನಿಧಿ ಯೋಜನೆಗೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಯುವನಿಧಿ ಯೋಜನೆ ಅಡಿ ಅರ್ಹ ಪದವೀಧರರು ಹಾಗೂ ಡಿಪ್ಲೊಮಾ ಪದವೀಧರರು ಸೇವಾ ಸಿಂಧು ಪೋರ್ಟಲ್‌ನಲ್ಲಿ ನೋಂದಣಿ ಮಾಡಿಕೊಳ್ಳುವಂತೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಪ್ರಕಟಣೆ ತಿಳಿಸಿದೆ. 2023, 2024, 2025 ಹಾಗೂ 2026ನೇ ಸಾಲಿನಲ್ಲಿ ಪದವಿ ಅಥವಾ ಡಿಪ್ಲೊಮಾ ಪೂರ್ಣಗೊಳಿಸಿ, ಫಲಿತಾಂಶ ಪ್ರಕಟವಾದ ಬಳಿಕ 180 ದಿನಗಳ ಕಾಲ ನಿರುದ್ಯೋಗಿಯಾಗಿರುವ ಅಭ್ಯರ್ಥಿಗಳು ಯೋಜನೆಗೆ ಅರ್ಹರಾಗಿದ್ದು, ಪದವೀಧರರಿಗೆ ಮಾಸಿಕ ₹3,000 ಹಾಗೂ ಡಿಪ್ಲೊಮಾ ಪದವೀಧರರಿಗೆ ₹1,500 ನಿರುದ್ಯೋಗ ಭತ್ಯೆ, ನೇರವಾಗಿ ಬ್ಯಾಂಕ್ ಖಾತೆಗೆ ಜಮಾ ಮಾಡಲಾಗುತ್ತದೆ. ಹೊಸದಾಗಿ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು ತಮ್ಮ ಮೂಲ ದಾಖಲೆಗಳೊಂದಿಗೆ ಜಿಲ್ಲಾ ಆಡಳಿತ ಭವನದ 2ನೇ ಮಹಡಿ, ಕೊಠಡಿ ಸಂಖ್ಯೆ 215ರಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಗೆ ಭೇಟಿ ನೀಡಿ ದಾಖಲೆಗಳನ್ನು ಪರಿಶೀಲಿಸಿ ದೃಢೀಕರಿಸಿಕೊಳ್ಳುವಂತೆ ಜಿಲ್ಲಾ ಉದ್ಯೋಗಾಧಿಕಾರಿ ಬಸವಂತ ಪಿ.ಎನ್. ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ 08372-220609 ದೂರವಾಣಿ ಸಂಖ್ಯೆಯನ್ನು ಸಂಪರ್ಕಿಸಬಹುದಾಗಿದೆ.

## ಶಾಲೆಯಿಂದ ಹೊರಗುಳಿಯುವ ಮಕ್ಕಳ ರಕ್ಷಣೆಗೆ ಶಿಕ್ಷಣವೇ ಅಸ್ತ್ರ: ಸಿ.ಎಸ್. ಶಿವನಗೌಡ್ರ

# ಜೀತ ಪದ್ಧತಿ-ಮಾನವ ಕಳ್ಳಸಾಗಾಣಿಕೆಗೆ ಕಡಿವಾಣ ಅಗತ್ಯ

**ವಿಜಯಸಾಕ್ಷಿ ಸುದ್ದಿ, ಗದಗ**

ಶಾಲೆಯಿಂದ ಹೊರಗುಳಿಯುವ ಮಕ್ಕಳು ಮಾನವ ಕಳ್ಳಸಾಗಾಣಿಕೆ ಹಾಗೂ ಜೀತ ಪದ್ಧತಿಯ ಮೊದಲ ಬಲಿಗಳಾಗುತ್ತಿದ್ದಾರೆ. ಪ್ರತಿಯೊಬ್ಬ ಮಗುವಿಗೂ ಶಿಕ್ಷಣದ ಹಕ್ಕು ತಲುಪಿದರೆ ಈ ಸಾಮಾಜಿಕ ಪಿಡುಗನ್ನು ಆರಂಭದಲ್ಲೇ ತಡೆಗಟ್ಟಬಹುದು ಎಂದು ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕಾರ್ಮಿಕ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಬಾಲಕಾರ್ಮಿಕ ನಿರ್ಮೂಲನಾ ಯೋಜನಾ ಸೊಸೈಟಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಉದಯೋನ್ಮುಖ ಸ್ವಯಂಸೇವಾ ಸಂಸ್ಥೆಯ ಸಂಯುಕ್ತ ಆಶ್ರಯದಲ್ಲಿ ಜಿಲ್ಲಾಡಳಿತ ಭವನದಲ್ಲಿ ಮಂಗಳವಾರ ಆಯೋಜಿಸಿದ್ದ ಮಾನವ ಕಳ್ಳಸಾಗಾಣಿಕೆ ಹಾಗೂ ಜೀತ ಪದ್ಧತಿ ಕಾರ್ಮಿಕ ವಿರೋಧಿ ಜಾಗೃತಿ ಅಭಿಯಾನಕ್ಕೆ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರೊಂದಿಗೆ ಹಸಿರು ನಿಶಾನೆ ತೋರಿಸಿ ಚಾಲನೆ ನೀಡಿ ಅವರು ಮಾತನಾಡಿದರು.




ಮಾನವ ಕಳ್ಳಸಾಗಾಣಿಕೆ ಮತ್ತು ಜೀತ ಪದ್ಧತಿ ಸಮಾಜದ ಘೋರ ಪಿಡುಗುಗಳಾಗಿದ್ದು, ಅವುಗಳನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಸರ್ಕಾರದ ವಿವಿಧ ಇಲಾಖೆಗಳು ಹಾಗೂ ಸಾರ್ವಜನಿಕರು ಒಗ್ಗಟ್ಟಿನಿಂದ ಕೆಲಸ ಮಾಡಬೇಕಿದೆ. ಕೆಲಸಕ್ಕೆ ತಕ್ಕ ವೇತನ ನೀಡದೆ ದುಡಿಸಿಕೊಳ್ಳುವುದೂ ಜೀತ ಪದ್ಧತಿಯ ಒಂದು ರೂಪವಾಗಿದ್ದು, ಇಂತಹ ಕೃತ್ಯಗಳ ವಿರುದ್ಧ ಸಮಾಜ ಜಾಗೃತವಾಗಬೇಕು ಎಂದು ಹೇಳಿದರು.

ಜೀತ ಪದ್ಧತಿಯಿಂದ ಮುಕ್ತಗೊಳಿಸುವುದಷ್ಟೇ ಸಾಕಾಗುವುದಿಲ್ಲ. ಸಂತ್ರಸ್ತರಿಗೆ ಬಿಡುಗಡೆ ಪತ್ರ, ಆರ್ಥಿಕ ನೆರವು, ಕೌಶಲ್ಯ ತರಬೇತಿ ಹಾಗೂ ಉದ್ಯೋಗಾವಕಾಶ ಕಲ್ಪಿಸುವ ಮೂಲಕ ಪುನರ್ವಸತಿ ಕಲ್ಪಿಸಿದಾಗ ಮಾತ್ರ ಅವರಿಗೆ ನಿಜವಾದ ನ್ಯಾಯ ದೊರೆಯುತ್ತದೆ ಎಂದು ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಮಾತನಾಡಿ, ಜೀತ ಪದ್ಧತಿ ನಡೆಸುವವರಷ್ಟೇ ಅಲ್ಲ, ಅದನ್ನು ಕಂಡೂ ಮೌನವಾಗಿರುವವರೂ ತಪ್ಪಿತಸ್ಥರಾಗುತ್ತಾರೆ. ಇಂತಹ ಪ್ರಕರಣಗಳು ಕಂಡುಬಂದ ತಕ್ಷಣ ಸಂಬಂಧಿಸಿದ ಇಲಾಖೆಗೆ ಮಾಹಿತಿ ನೀಡುವುದು ಪ್ರತಿಯೊಬ್ಬ ನಾಗರಿಕನ ಕರ್ತವ್ಯವಾಗಿದೆ ಎಂದರು.

ಉದಯೋನ್ಮುಖ ಸ್ವಯಂಸೇವಾ ಸಂಸ್ಥೆಯ ಅಧ್ಯಕ್ಷ ವೈ. ಪಕ್ಕಣ್ಣ ಬೆಲೇರಿ ಮಾತನಾಡಿ, ಜೀತ ಪದ್ಧತಿಯಿಂದ ಮುಕ್ತರಾದ ಸಂತ್ರಸ್ತರ ಅನುಭವಗಳನ್ನೇ ಆಧಾರವಾಗಿಟ್ಟುಕೊಂಡು ರಾಜ್ಯಾದ್ಯಂತ ಜಾಗೃತಿ ಮೂಡಿಸಲಾಗುತ್ತಿದೆ. ಯಾರೂ ಅಜ್ಞಾನದಿಂದ ಊರು ಬಿಟ್ಟು ಹೋಗಿ ಇಂತಹ ಸಂಕಷ್ಟಗಳಿಗೆ ಸಿಲುಕಬಾರದು ಎಂಬ ಉದ್ದೇಶದಿಂದ ಅಭಿಯಾನ ನಡೆಸಲಾಗುತ್ತಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಾನವ ಕಳ್ಳಸಾಗಾಣಿಕೆ ಹಾಗೂ ಜೀತ ಪದ್ಧತಿ ವಿರೋಧಿ ಪ್ರತಿಜ್ಞಾವಿಧಿ ಬೋಧಿಸಲಾಯಿತು. ಜಾಗೃತಿ ಪೋಸ್ಟರ್‌ಗಳನ್ನು ಬಿಡುಗಡೆ ಮಾಡಲಾಗಿದ್ದು, ಜಿ-ಸ್ಕ್ವಾಡ್ ತಂಡದಿಂದ ಕಿರು ನಾಟಕ ಪ್ರದರ್ಶನ ನಡೆಯಿತು. ಬಳಿಕ ಜಾಗೃತಿ ವಾಹನವು ಲಕ್ಕುಂಡಿ, ನಾಗರಾಳ, ಹಳಿಕೇರಿ, ಗದಗ ನಗರ ಸೇರಿದಂತೆ ವಿವಿಧೆಡೆ ಸಂಚರಿಸಿ ಸಾರ್ವಜನಿಕರಲ್ಲಿ ಅರಿವು ಮೂಡಿಸಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಕಾರ್ಮಿಕ ಅಧಿಕಾರಿ ಶ್ರೀಶೈಲ ಸೋಮನಕಟ್ಟಿ, ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಸಿ.ಆರ್. ಮುಂಡರಗಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕಿ ರಾಧಾ ಮಣ್ಣೂರ, ಜಿಲ್ಲಾ ಆರೋಗ್ಯಾಧಿಕಾರಿ ಎಸ್.ಎಸ್. ನೀಲಗುಂದ, ಜಿಲ್ಲಾ ಬಾಲಕಾರ್ಮಿಕ ಯೋಜನಾ ನಿರ್ದೇಶಕ ಸಂದೀಪ್ ಪಾಟೀಲ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ವಿದ್ಯಾರ್ಥಿಗಳು ಹಾಗೂ ಸ್ವಯಂಸೇವಾ ಸಂಸ್ಥೆಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

> **ಶಾಲೆ ಬಿಟ್ಟ ಪ್ರತಿಯೊಂದು ಮಗುವನ್ನು ಮರಳಿ ಶಿಕ್ಷಣದ ಮುಖ್ಯವಾಹಿನಿಗೆ ತರುವುದು ಮಾನವ ಕಳ್ಳಸಾಗಾಣಿಕೆ ಹಾಗೂ ಜೀತ ಪದ್ಧತಿ ನಿರ್ಮೂಲನೆಯ ಮೊದಲ ಹೆಜ್ಜೆಯಾಗಿದೆ.**
>
> **- ಸಿ.ಎಸ್. ಶಿವನಗೌಡ್ರ,**
> ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿ,
> ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ

# ಹೂಗಾರ ಡಬ್ಬಿಂಗ್ ಪೂರ್ಣ; ಶೀಘ್ರದಲ್ಲೇ ಟ್ರೇಲರ್ ಬಿಡುಗಡೆ

**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಕೀರ್ತನ ಮೂವ್ಹಿ ಮೇಕರ್ಸ್ ಹಾಗೂ ಕೆಆರ್‌ಎಸ್ ಪ್ರೊಡಕ್ಷನ್, ಬೆಂಗಳೂರು ಬ್ಯಾನರ್ ಅಡಿಯಲ್ಲಿ ಡಾ. ಶಿವಕುಮಾರ ಸ್ವಾಮೀಜಿಯವರ ಆಶೀರ್ವಾದದೊಂದಿಗೆ ನಿರ್ಮಾಣವಾಗಿರುವ ಹೂಗಾರಟಿ ಕನ್ನಡ ಚಲನಚಿತ್ರದ ಡಬ್ಬಿಂಗ್ ಕಾರ್ಯ ಯಶಸ್ವಿಯಾಗಿ ಪೂರ್ಣಗೊಂಡಿದ್ದು, ಶೀಘ್ರದಲ್ಲೇ ಗದಗ ನಗರದಲ್ಲಿ ಚಿತ್ರದ ಟ್ರೇಲರ್ ಬಿಡುಗಡೆಗೊಳ್ಳಲಿದೆ.



ಚಿತ್ರದ ಚಿತ್ರೀಕರಣವನ್ನು ಬಾಗಲಕೋಟೆ ಜಿಲ್ಲೆಯ ಇಲಕಲ್ ತಾಲೂಕಿನ ಸಿದ್ದನಕೊಳ್ಳ ಮಠ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ 30 ದಿನಗಳ ಕಾಲ ನಡೆಸಲಾಗಿದೆ. ಉತ್ತರ ಕರ್ನಾಟಕದ ಭಾಷೆ, ಸಂಸ್ಕೃತಿ ಮತ್ತು ಸ್ಥಳೀಯ ಪ್ರತಿಭೆಗಳಿಗೆ ಹೆಚ್ಚಿನ ಅವಕಾಶ ನೀಡಿರುವುದು ಚಿತ್ರದ ವಿಶೇಷವಾಗಿದೆ.

ಶ್ರೀಮಠದ ಪೀಠಾಧಿಪತಿ ಡಾ. ಶಿವಕುಮಾರ ಸ್ವಾಮೀಜಿ ಚಿತ್ರದ ಹಾಡೊಂದರಲ್ಲಿ ಅಭಿನಯಿಸಿರುವುದು ಮತ್ತೊಂದು ವಿಶೇಷ. ಇದು ಕೇವಲ ಒಂದು ಕಂಬವಲ್ಲ; ಕರ್ನಾಟಕದ ಆತ್ಮ, ಶಕ್ತಿ, ಶಿಸ್ತು ಮತ್ತು ಸಾಧನೆಯ ಪ್ರತೀಕ ಎಂದು ಚಿತ್ರದ ನಿರ್ದೇಶಕ ಲೋಕೇಶ್ ವಿದ್ಯಾಧರ ತಿಳಿಸಿದ್ದಾರೆ.

ಚಿತ್ರದಲ್ಲಿ ಲೋಕೇಶ್ ವಿದ್ಯಾಧರ, ಸುನಂದಾ ಕಲ್ಬುರ್ಗಿ, ಕಾಮಿಡಿ ಕಿಲಾಡಿಗಳು ಖ್ಯಾತಿಯ ದಾನಪ್ಪ, ಮಾಂತೇಶ್ ಹಳ್ಳೂರ, ತೇಜಸ್ ಶಿವರಾಜ್, ಕಿರಣ್ ಹೂಗಾರ, ಅಪೂರ್ವ, ಮುತ್ತುರಾಜ್ ಬುದ್ನಿ, ಕಿಟ್ಟಿ ತಾಳಿಕೋಟೆ, ಕುಮಾರ್ ಬಾಬು, ಸತೀಶ್ ಶೆಟ್ಟಿ, ಮಂಜುಳಾ ಅರಸ್, ಭಾವನಾ ಶಿಂಧೆ, ವಿದ್ಯಾ ಗಂಜಿಹಾಳ, ದಶರಥ ಸೇರಿದಂತೆ ಹಲವು ಕಲಾವಿದರು ಅಭಿನಯಿಸಿದ್ದಾರೆ.

ಮಲ್ಲಕಂಬ ಪ್ರದರ್ಶನವನ್ನು ಸಿದ್ಧಾರೂಢ ಹೂಗಾರ ಹಾಗೂ ಜೈ ಕರ್ನಾಟಕ ಮಲ್ಲಕಂಬ ತಂಡ ನಿರ್ವಹಿಸಿದ್ದು, ಸಂಭಾಷಣೆಯನ್ನು ಶಿವಂ ಬೆಂಗೇರಿ, ಸಾಹಿತ್ಯವನ್ನು ಲೋಕೇಶ್ ವಿದ್ಯಾಧರ, ಶಿವರಾಜ್ ಹಾಗೂ ಕಿನ್ನಾಳ ರಾಜ್ ರಚಿಸಿದ್ದಾರೆ. ಈ ಹಿಂದೆ ಒಬ್ಬಟ್ಟುಟಿ ಚಿತ್ರ ನಿರ್ದೇಶಿಸಿದ್ದ ಲೋಕೇಶ್ ವಿದ್ಯಾಧರ ಅವರೇ ಈ ಚಿತ್ರದ ಕಥೆ, ಚಿತ್ರಕಥೆ ಹಾಗೂ ನಿರ್ದೇಶನದ ಹೊಣೆ ಹೊತ್ತಿದ್ದಾರೆ.

ಚಿತ್ರಕ್ಕೆ ಕೀರ್ತನ ಮೂವ್ಹಿ ಮೇಕರ್ಸ್ ಹಾಗೂ ಕೆಆರ್‌ಎಸ್ ಪ್ರೊಡಕ್ಷನ್ ನಿರ್ಮಾಪಕರಾಗಿದ್ದು, ಟ್ರೇಲರ್ ಬಿಡುಗಡೆ ಬಳಿಕ ಚಿತ್ರದ ಬಿಡುಗಡೆ ದಿನಾಂಕವನ್ನು ಪ್ರಕಟಿಸಲಾಗುವುದು ಎಂದು ಚಿತ್ರತಂಡ ತಿಳಿಸಿದೆ.

# ಸಚಿವ ಸಂಪುಟದಲ್ಲಿ ಮಹಿಳೆಯರಿಗೆ ಸ್ಥಾನವಿಲ್ಲ; ರಾಜ್ಯ ಸರ್ಕಾರದ ವಿರುದ್ಧ ಎಎಪಿ ಆಕ್ರೋಶ

**ವಿಜಯಸಾಕ್ಷಿ ಸುದ್ದಿ, ಗದಗ**



ರಾಜ್ಯ ಸಚಿವ ಸಂಪುಟ ವಿಸ್ತರಣೆಯಲ್ಲಿ ಮಹಿಳಾ ಶಾಸಕರಿಗೆ ಅವಕಾಶ ನೀಡದಿರುವುದು ರಾಜ್ಯದ ಮಹಿಳಾ ಸಮುದಾಯಕ್ಕೆ ಮಾಡಿದ ಅನ್ಯಾಯ ಎಂದು ಆಮ್ ಆದ್ಮಿ ಪಕ್ಷದ ಗದಗ ಮಹಿಳಾ ಘಟಕದ ಅಧ್ಯಕ್ಷೆ ಶೃತಿ ಹಿರೇಮಠ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಪತ್ರಿಕಾ ಪ್ರಕಟಣೆ ಮೂಲಕ ಪ್ರತಿಕ್ರಿಯಿಸಿರುವ ಅವರು, ರಾಜ್ಯದ ಸುಮಾರು 3.40 ಕೋಟಿ ಮಹಿಳೆಯರನ್ನು ಪ್ರತಿನಿಧಿಸುವ ಸಚಿವ ಸ್ಥಾನವನ್ನು ಸಂಪೂರ್ಣವಾಗಿ ಕಡೆಗಣಿಸಿರುವುದು ಕಾಂಗ್ರೆಸ್ ಸರ್ಕಾರದ ಮಹಿಳಾ ಪರ ನಿಲುವಿನ ಬಗ್ಗೆ ಪ್ರಶ್ನೆಗಳನ್ನು ಹುಟ್ಟುಹಾಕಿದೆ ಎಂದು ಟೀಕಿಸಿದರು.

ದೇಶದಲ್ಲಿ ಮಹಿಳೆಯರಿಗೆ ಶೇ.33ರಷ್ಟು ಮೀಸಲಾತಿಯ ಬಗ್ಗೆ ಕಾಂಗ್ರೆಸ್ ನಾಯಕರು ನಿರಂತರವಾಗಿ ಮಾತನಾಡುತ್ತಿದ್ದರೂ, ರಾಜ್ಯ ಸಚಿವ ಸಂಪುಟದಲ್ಲಿ ಮಹಿಳಾ ಶಾಸಕರಿಗೆ ಅವಕಾಶ ನೀಡದಿರುವುದು ನೈತಿಕ ವೈಫಲ್ಯವಾಗಿದೆ ಎಂದು ಅವರು ಆರೋಪಿಸಿದರು.

ಅಲ್ಲದೆ, ಪ್ರಾದೇಶಿಕ ಸಮತೋಲನ ಹಾಗೂ ಅಭಿವೃದ್ಧಿಯ ದೃಷ್ಟಿಯಿಂದ ಗದಗ ಜಿಲ್ಲೆಗೂ ಸಚಿವ ಸಂಪುಟದಲ್ಲಿ ಸೂಕ್ತ ಪ್ರಾತಿನಿಧ್ಯ ನೀಡಬೇಕು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಅವರು ಒತ್ತಾಯಿಸಿದ್ದಾರೆ.

> **ಮಹಿಳಾ ಸಬಲೀಕರಣದ ಬಗ್ಗೆ ಮಾತನಾಡುವ ಕಾಂಗ್ರೆಸ್, ಸಚಿವ ಸಂಪುಟದಲ್ಲಿ ಮಹಿಳೆಯರಿಗೆ ಅವಕಾಶ ನೀಡದೇ ದ್ವಂದ್ವ ನೀತಿ ಅನುಸರಿಸಿದೆ. ಮಹಿಳಾ ಪ್ರಾತಿನಿಧ್ಯವಿಲ್ಲದ ಸಂಪುಟ ರಾಜ್ಯದ ಮಹಿಳೆಯರಿಗೆ ಮಾಡಿದ ಅನ್ಯಾಯ.**
>
> **- ಶೃತಿ ಹಿರೇಮಠ,** ಅಧ್ಯಕ್ಷೆ,
> ಎಎಪಿ ಮಹಿಳಾ ಘಟಕ, ಗದಗ

# ಈದ್-ಮಿಲಾದ್ ಸಮಿತಿಗೆ ನೂತನ ಅಧ್ಯಕ್ಷರಾಗಿ ಆಶೀಫ್ ದಂಡಿನ ಆಯ್ಕೆ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಈದ್-ಮಿಲಾದ್ ಸಮಿತಿಯ 2026-27ನೇ ಸಾಲಿನ ನೂತನ ಪದಾಧಿಕಾರಿಗಳ ಆಯ್ಕೆ ಸಭೆ ನಗರದ ಸರ್ಕಾರಿ ಉರ್ದು ಶಾಲೆ ನಂ. 2ರಲ್ಲಿ ಹಿರಿಯ ಮುಖಂಡರು ಹಾಗೂ ಧರ್ಮಗುರುಗಳ ಸಮ್ಮುಖದಲ್ಲಿ ನಡೆಯಿತು.




ಸಭೆಯಲ್ಲಿ 2025ನೇ ಸಾಲಿನ ಅಧ್ಯಕ್ಷ ಉಸ್ಮಾನ್ ಮಾಳೆಕೊಪ್ಪ ನೇತೃತ್ವದ ಸಮಿತಿಯು ಹಿಂದಿನ ವರ್ಷದ ಲೆಕ್ಕಪತ್ರ ಗಳನ್ನು ಮಂಡಿಸಿ, ನೂತನ ಸಮಿತಿಗೆ ಅಧಿಕಾರ ಹಸ್ತಾಂತರ ಮಾಡಿತು.

ನೂತನ ಸಮಿತಿಯ ಅಧ್ಯಕ್ಷರಾಗಿ ಆಶೀಫ್ ದಂಡಿನ, ಉಪಾಧ್ಯಕ್ಷರಾಗಿ ಯೂಸುಫ್ ಡಂಬಳ, ಕಾರ್ಯದರ್ಶಿಯಾಗಿ ಅಹ್ಮದ್ ಖಾಜಿ ಹಾಗೂ ಪ್ರಚಾರ ಸಮಿತಿ ಅಧ್ಯಕ್ಷರಾಗಿ ಅನ್ವರ್ ಶಿರಹಟ್ಟಿ ಅವರನ್ನು ಆಯ್ಕೆ ಮಾಡಲಾಯಿತು. ಈ ಸಂದರ್ಭದಲ್ಲಿ ಹಿರಿಯ ಮುಖಂಡರಾದ ಅಕ್ಬರ್‌ಸಾಬ್ ಬಬರ್‌ಚಿ, ಎಂ.ಎಂ. ಮಾಳೆಕೊಪ್ಪ, ಮೌಲಾನ ಶಮಿಶುದ್ದೀನ್, ಮೌಲಾನ ಅಬ್ದುಲ್ ಗಫೂರ್‌ಸಾಬ್ ಪಲ್ಲೇದ, ಅಬೂಬಕರ್ ಅಣ್ಣಿಗೇರಿ, ಅಬ್ದುಲ್ ಮುಲ್ಲಾ, ರಫೀಕ್ ಅಬ್ಬಿಗೇರಿ ಸೇರಿದಂತೆ ಅನೇಕರು ನೂತನ ಪದಾಧಿಕಾರಿಗಳನ್ನು ಸನ್ಮಾನಿಸಿ ಶುಭ ಹಾರೈಸಿದರು.

ಧರ್ಮಗುರುಗಳು ಪ್ರವಾದಿ ಪೈಗಂಬರ್ ಜಯಂತಿಯನ್ನು ಆಡಂಬರದಿಂದಲ್ಲ, ಶಾಂತಿ, ಸೌಹಾರ್ದತೆ ಹಾಗೂ ಸಮಾಜಮುಖಿ ಚಟುವಟಿಕೆಗಳ ಮೂಲಕ ಅರ್ಥಪೂರ್ಣವಾಗಿ ಆಚರಿಸುವಂತೆ ಕರೆ ನೀಡಿದರು ಎಂದು ಪ್ರಕಟಣೆಯಲ್ಲಿ ಭಾಷಾಸಾಬ್ ಎಫ್. ಮಲ್ಲಸಮುದ್ರ ತಿಳಿಸಿದ್ದಾರೆ.

# ಮಾನವ ಹಕ್ಕುಗಳ ಒಕ್ಕೂಟಕ್ಕೆ ನೂತನ ಪದಾಧಿಕಾರಿಗಳು



**ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ಭಾರತೀಯ ಮಾನವ ಹಕ್ಕುಗಳು, ಅಪರಾಧ ವಿರೋಧಿ ಹಾಗೂ ಭ್ರಷ್ಟಾಚಾರ ವಿರೋಧಿ ಒಕ್ಕೂಟದ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭದ ಅಂಗವಾಗಿ ಪದಗ್ರಹಣ ಆಹ್ವಾನ ಪತ್ರಿಕೆಯನ್ನು ಶ್ರೀ ಅಮರನಾಥೇಶ್ವರ ಮಹದೇವ ಮಠದ ಪೀಠಾಧೀಶ್ವರರಾದ ಶ್ರೀ ಮಹಾಂತ ಸಹದೇವಾನಂದ ಗುರುಜಿ ಮಹಾರಾಜರಿಗೆ ನೀಡಿ ಆಶೀರ್ವಾದ ಪಡೆಯಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಶ್ರೀ ಮಹಾಂತ ಸಹದೇವಾನಂದ ಗುರುಜಿ ಮಹಾರಾಜರು, ಸಮಾಜದ ಒಳಿತಿಗಾಗಿ ಯುವಕರು ಮತ್ತು ಮಹಿಳೆಯರು ಸೇವಾ ಮನೋಭಾವದಿಂದ ಕಾರ್ಯನಿರ್ವಹಿಸಬೇಕು. ಉತ್ತಮ ಸಂಸ್ಕಾರ, ಶಿಸ್ತು ಹಾಗೂ ಸಮಾಜಮುಖಿ ಚಿಂತನೆ ಬೆಳೆಸಿಕೊಂಡು ನೊಂದವರ ಬದುಕಿಗೆ ಬೆಳಕು ನೀಡುವ ಕಾರ್ಯವನ್ನು ಇಂತಹ ಸಂಘಟನೆಗಳು ನಿರಂತರವಾಗಿ ನಡೆಸಬೇಕು. ಸಮಾಜದಲ್ಲಿ ಸಾತ್ವಿಕ ಮೌಲ್ಯಗಳನ್ನು ಬೆಳೆಸುವಲ್ಲಿ ಸಂಘ-ಸಂಸ್ಥೆಗಳ ಪಾತ್ರ ಮಹತ್ವದ್ದಾಗಿದೆ ಎಂದು ಹೇಳಿದರು.

ಭಾರತೀಯ ಮಾನವ ಹಕ್ಕುಗಳು, ಅಪರಾಧ ವಿರೋಧಿ ಹಾಗೂ ಭ್ರಷ್ಟಾಚಾರ ವಿರೋಧಿ ಒಕ್ಕೂಟದ ಸಂಸ್ಥಾಪಕ ಹಾಗೂ ರಾಷ್ಟ್ರೀಯ ಅಧ್ಯಕ್ಷ ಸದ್ದಾಂ ಹುಸೇನ ಜಿಗಳೂರ ಅವರು ಉತ್ತರ ಕರ್ನಾಟಕ ವಿಭಾಗ ಹಾಗೂ ಗದಗ ಜಿಲ್ಲಾ ಘಟಕದ ನೂತನ ಪದಾಧಿಕಾರಿಗಳನ್ನು ನೇಮಕಗೊಳಿಸಿ ಆದೇಶ ಹೊರಡಿಸಿದ್ದಾರೆ.

ಒಕ್ಕೂಟದ ಉತ್ತರ ಕರ್ನಾಟಕ ವಿಭಾಗದ ಮಹಿಳಾ ಅಧ್ಯಕ್ಷರಾಗಿ ನಿರ್ಮಲಾ ತರವಾಡೆ, ಉಪಾಧ್ಯಕ್ಷರಾಗಿ ಬಸವರಾಜ ನೆಲಜೇರಿ, ಗದಗ ಜಿಲ್ಲಾ ಅಧ್ಯಕ್ಷರಾಗಿ ಭಾಗ್ಯಶ್ರೀ ಹುರಕಡ್ಲಿ, ಜಿಲ್ಲಾ ಉಪಾಧ್ಯಕ್ಷರಾಗಿ ಪವನ್ ಮೇರವಾಡೆ, ನಾಗರಾಜ ಕೃಷ್ಣಜಿ ಮುಖೆ, ವೀರೇಶ ಕಆರ್‌ಗನೂರ ಹಾಗೂ ಗಣೇಶ ಮೇರವಾಡೆ ಅವರನ್ನು ನೇಮಕ ಮಾಡಲಾಗಿದೆ.

ಈ ಸಂದರ್ಭದಲ್ಲಿ ಮಹಾಂತೇಶ ಬೇಕರಿ ಮಾಲೀಕ ಚಂದ್ರು ನಾವಿ, ಶಶಿಕಲಾ ಮೇಟಿ, ಪತ್ರಕರ್ತೆ ಯಲ್ಲಮ್ಮ ರಾಠೋಡ, ಪತ್ರಕರ್ತ ಲಿಂಗರಾಜ ಮುದಗಲ್ಲ, ಶ್ರೀಮಾತಾ ಹೋಟೆಲ್ ಮಾಲೀಕ ಮಹೇಶ್ ತೆಗ್ಗಿನಮನಿ, ಗೀತಾ ಜಾಧವ, ಐಶ್ವರ್ಯ ರಾಠೋಡ, ಪ್ರಕಾಶ ಬಳಗಾನೂರ ಸೇರಿದಂತೆ ಒಕ್ಕೂಟದ ಸದಸ್ಯರು ಉಪಸ್ಥಿತರಿದ್ದರು.

# ದೇಶಭಕ್ತಿಯ ಶಿಕ್ಷಣದಿಂದಲೇ ಸದೃಢ ಭಾರತ ನಿರ್ಮಾಣ: ಸಿ.ಸಿ. ಪಾಟೀಲ



**ವಿಜಯಸಾಕ್ಷಿ ಸುದ್ದಿ, ಗದಗ**

ಭಾರತದ ಆಧ್ಯಾತ್ಮಿಕ ಪರಂಪರೆ, ಸಾಂಸ್ಕೃತಿಕ ವೈಭವ ಹಾಗೂ ಮಹಾಪುರುಷರ ಆದರ್ಶ ಜೀವನ ಚರಿತ್ರೆಯನ್ನು ಯುವ ಪೀಳಿಗೆಗೆ ಪರಿಚಯಿಸುವುದು ಇಂದಿನ ಶಿಕ್ಷಣ ವ್ಯವಸ್ಥೆಯ ಪ್ರಮುಖ ಹೊಣೆಗಾರಿಕೆಯಾಗಿದೆ ಎಂದು ಮಾಜಿ ಸಚಿವ ಹಾಗೂ ಶಾಸಕ ಸಿ.ಸಿ. ಪಾಟೀಲ ಹೇಳಿದರು. ನಗರದ ಮುಂಡರಗಿ ರಸ್ತೆಯಲ್ಲಿರುವ ಪಾಪನಾಶಿಯ ಜೆ.ಜಿ. ಇಂಟರ್‌ನ್ಯಾಷನಲ್ ಶಾಲೆಯಲ್ಲಿ ಭಾನುವಾರ ನಡೆದ ವಿದ್ಯಾಭಾರತಿ ಕರ್ನಾಟಕ ಪ್ರಾಂತೀಯ ಸಾಧಾರಣ ಸಭೆ ಹಾಗೂ ವಿದ್ಯಾಭಾರತಿ ದಕ್ಷಿಣ ಮಧ್ಯಕ್ಷೇತ್ರ ಸಾಧಾರಣ ಸಭೆ-2026 ಉದ್ಘಾಟಿಸಿ ಅವರು ಮಾತನಾಡಿದರು.

ಭಾರತದ ಶ್ರೇಷ್ಠ ಸಂಸ್ಕೃತಿ, ಜೀವನ ಮೌಲ್ಯಗಳು ಹಾಗೂ ಮಹಾಪುರುಷರ ಆದರ್ಶಗಳು ಇಡೀ ವಿಶ್ವವನ್ನು ಆಕರ್ಷಿಸಿವೆ. ಪ್ರತಿಯೊಬ್ಬ ಭಾರತೀಯರೂ ತಮ್ಮ ದೇಶದ ಪರಂಪರೆಯ ಬಗ್ಗೆ ಹೆಮ್ಮೆ ಪಡಬೇಕು. ವಿಶ್ವದ ಹಲವು ರಾಷ್ಟ್ರಗಳು ತಮ್ಮ ಸಂಸ್ಕೃತಿಯನ್ನು ಶಿಕ್ಷಣದ ಮೂಲಕ ಮುಂದಿನ ಪೀಳಿಗೆಗೆ ಪರಿಚಯಿಸುತ್ತಿವೆ. ಅದೇ ರೀತಿಯಲ್ಲಿ ಭಾರತದಲ್ಲೂ ವಿದ್ಯಾಭಾರತಿ ಸಂಸ್ಥೆ ರಾಷ್ಟ್ರೀಯತೆ, ಸಂಸ್ಕಾರ ಮತ್ತು ದೇಶಭಕ್ತಿಯ ಶಿಕ್ಷಣ ನೀಡುವ ಮೂಲಕ ಮಹತ್ವದ ಕಾರ್ಯ ನಿರ್ವಹಿಸುತ್ತಿದೆ ಎಂದು ಹೇಳಿದರು. ವಿದ್ಯಾಭಾರತಿ ದೇಶಾದ್ಯಂತ 24 ಸಾವಿರಕ್ಕೂ ಹೆಚ್ಚು ಶಾಲೆಗಳಲ್ಲಿ ಸುಮಾರು 35 ಲಕ್ಷ ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡುತ್ತಿದ್ದು, ಕರ್ನಾಟಕದಲ್ಲಿಯೇ 412ಕ್ಕೂ ಹೆಚ್ಚು ಶಾಲೆಗಳಲ್ಲಿ ಒಂದು ಲಕ್ಷಕ್ಕೂ ಅಧಿಕ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ.

ರಾಜ್ಯದಲ್ಲಿ ವಿದ್ಯಾಭಾರತಿಗೆ ಸಂಯೋಜಿತವಾಗಿ 605 ಶಿಕ್ಷಣ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿದ್ದು, ಮಕ್ಕಳ ವ್ಯಕ್ತಿತ್ವ ವಿಕಸನ, ಸಾಮಾಜಿಕ ಜವಾಬ್ದಾರಿ ಹಾಗೂ ರಾಷ್ಟ್ರಪ್ರೇಮ ಬೆಳೆಸುವಲ್ಲಿ ನಿರಂತರ ಶ್ರಮಿಸುತ್ತಿವೆ ಎಂದು ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಿದ್ಯಾಭಾರತಿ ಕರ್ನಾಟಕ ರಾಜ್ಯಾಧ್ಯಕ್ಷ ಪರಮೇಶ್ವರ ಹೆಗಡೆ ವಹಿಸಿದ್ದರು. ಈ ಸಂದರ್ಭದಲ್ಲಿ ಉಮೇಶ್ ಕುರ್ಮಾ, ಜೆ.ಜಿ. ಇಂಟರ್‌ನ್ಯಾಷನಲ್ ಶಾಲೆಯ ಸಂಸ್ಥಾಪಕ ಐ.ಎಸ್. ಪೂಜಾರ, ವಿಎಚ್‌ಪಿ ಸದಸ್ಯ ಎಸ್.ವಿ. ಸಂಕನೂರ, ರಾಜು ಕುರಡಗಿ, ಶ್ರೀಪತಿ, ನಿವೃತ್ತ ಐಎಎಸ್ ಅಧಿಕಾರಿ ಮಂಜುನಾಥ ಪ್ರಸಾದ್, ಸುನೀತಾ ಐ. ಪೂಜಾರ, ಮಹಾಂತೇಶ ಬಾತಾಖಾನಿ, ಚಂದ್ರಕಾಂತ್ ಚವ್ಹಾಣ, ಶಶಿಧರ ದಿಂಡೂರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಗಾಳೆಮ್ಮ ದೇವಿ ದೇವಸ್ಥಾನ ನಿರ್ಮಾಣಕ್ಕೆ ₹51 ಸಾವಿರ ದೇಣಿಗೆ




**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಪಟ್ಟಣದ ನಗರದೇವತೆಯಾದ ಶ್ರೀ ಗಾಳೆಮ್ಮ ದೇವಿಯ ನೂತನ ದೇವಸ್ಥಾನ ನಿರ್ಮಾಣಕ್ಕಾಗಿ ರಾಮನಗರದ ಶ್ರೀಮತಿ ಮಮತಾ ಹಾಗೂ ಮೇದಾರ್ ವೆಂಕಟೇಶ್ ಕುಟುಂಬದವರು ₹51,000 ದೇಣಿಗೆ ನೀಡಿ ಧಾರ್ಮಿಕ ಸೇವೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಗಾಳೆಮ್ಮ ದೇವಿ ಸೇವಾ ಟ್ರಸ್ಟ್‌ನ ಪದಾಧಿಕಾರಿಗಳು ದೇಣಿಗೆ ಸ್ವೀಕರಿಸಿ, ದೇವಿಯ ಕೃಪೆಯಿಂದ ಕುಟುಂಬವು ಆರೋಗ್ಯ, ಐಶ್ವರ್ಯ ಹಾಗೂ ಸುಖ-ಸಮೃದ್ಧಿಯಿಂದ ಇರಲೆಂದು ಶುಭ ಹಾರೈಸಿದರು.

ಕಾರ್ಯಕ್ರಮದಲ್ಲಿ ಟ್ರಸ್ಟ್‌ನ ಪದಾಧಿಕಾರಿಗಳಾದ ಬಂಗಾರಿ ಗಾಳಿರಾಜ್, ರಾಜಣ್ಣನವರ ಹುಚ್ಚಪ್ಪ, ಮಡಿವಾಳರ ಅಶೋಕ್, ಬಡಿಗೇರ್ ಬಸರಾಜ್, ಬಂಟರ ಗಾಳೆಪ್ಪ, ಜೋಗಿ ಹನುಮಂತಪ್ಪ, ಸರ್ದಾರ್ ಯಮನೂರಪ್ಪ, ಪೂಜಾರ್ ವೆಂಕಟೇಶಪ್ಪ ಸೇರಿದಂತೆ ಟ್ರಸ್ಟ್ ಸದಸ್ಯರು ಹಾಗೂ ಭಕ್ತರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka